# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 99 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 02–11–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 99 | RNI No: KARKAN/2023/88462 | Chitradurga | Date: 02-11-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಉದ್ಯೋಗದಲ್ಲ ಅವಕಾಶ ಕಲ್ಪಿಸಲು ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ ಜಾರಿ 2

ಕನ್ನಡ ಸರ್ವತೋಮುಖ ಬೆಳವಣಿಗೆಗೆ ಎಲ್ಲರ ಸಹಕಾರ ಅಗತ್ಯ: ಕೆ.ತಿಮ್ಮಯ್ಯ 3

ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ರಾಜ್ಯ ಸರ್ಕಾರ ಬದ್ಧ: ಮಲ್ಲಿಕಾರ್ಜುನ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಚಿನ್ನ 70,000 ರೂಪಾಯಿ ಕುಸಿತ...

24 ಕ್ಯಾರಟ್ ಅಪರಂಜಿ ಚಿನ್ನದ ಬೆಲೆ ಪ್ರತಿ 1 ಕೆ.ಜಿ.ಗೆ 70,000 ರೂಪಾಯಿ ಕುಸಿತ ಕಂಡಿದೆ. ಹಾಗೇ 22 ಕ್ಯಾರಟ್‌ನ 10 ಗ್ರಾಂ ಚಿನ್ನದ ಬೆಲೆ 73,850 ರೂಪಾಯಿಗೆ ತಲುಪಿದೆ. ಈ ಮೂಲಕ ಸತತ ಏರಿಕೆ ಕಾಣುತ್ತಿದ್ದ ಚಿನ್ನದ ಬೆಲೆಯಲ್ಲಿ ಭಾರಿ ಇಳಿಕೆ ಕಂಡು ಬಂದಿದೆ. ಅದರಲ್ಲೂ, ದೀಪಾವಳಿ ಹಬ್ಬ ಮುಕ್ತಾಯದ ಸಮಯಕ್ಕೆ ಚಿನ್ನದ ಬೆಲೆ ಇಳಿಕೆ ಕಂಡಿದ್ದು, ಹಬ್ಬದಲ್ಲಿ ಈ ರೀತಿ ಚಿನ್ನದ ಬೆಲೆ ಕುಸಿತ ಕಂಡಿದ್ದರೆ ಚನ್ನಾಗಿ ಇತ್ತು ಅನ್ನೋ ಮಾತನ್ನ ಆಭರಣ ಪ್ರಿಯರು ಹೇಳುತಿದ್ದಾರೆ. ಮತ್ತೊಂದು ಕಡೆ ಬೆಳ್ಳಿ ಬೆಲೆ ಕೂಡ ಪ್ರತಿ ಕೆಜಿಗೆ 3,000 ಸಾವಿರ ರೂಪಾಯಿ ಕುಸಿದು ಬಿದ್ದಿದೆ.

### ಚನ್ನಪಟ್ಟಣದಲ್ಲಿ ಕಾಂಗ್ರೆಸ್‌ಗೆ ಆಘಾತ, ಸಿಎಂ ಆಪ್ತೆ ಜೆಡಿಎಸ್‌ಗೆ ಸೇರ್ಪಡೆ!

» ರಾಮನಗರ

ಚನ್ನಪಟ್ಟಣದಲ್ಲಿ ಉಪಚುನಾವಣೆಯ ಕಾವು ದಿನೇ–ದಿನೇ ರಂಗೇರುತ್ತಿದ್ದು, ಈ ಸಮಯದಲ್ಲೇ ಪಕ್ಷಕ್ಕೆ ಸೆಳೆಯುವ ತಂತ್ರವೂ ಜೋರಾಗಿ ನಡೆದಂತಿದೆ. ಕಾಂಗ್ರೆಸ್ ನಾಯಕಿ ಹಾಗೂ ಸಿಎಂ ಸಿದ್ದರಾಮಯ್ಯ ಅವರ ಆಪ್ತೆ ಗೀತಾ ಶಿವರಾಮ್ ಅವರು ಇಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಸಮ್ಮುಖದಲ್ಲೇ ಜೆಡಿಎಸ್‌ಗೆ ಸೇರ್ಪಡೆಗೊಂಡರು.

### ಟಿಟಿಡಿ ಮಂಡಳಿ ಸದಸ್ಯರಾಗಿ ರಾಜ್ಯದ ಮೂವರು

» ಬೆಂಗಳೂರು

ತಿರುಮಲ ತಿರುಪತಿ ದೇವಸ್ಥಾನದ (ಟಿಟಿಡಿ) ಆಡಳಿತ ಮಂಡಳಿಗೆ ಆಂಧ್ರಪ್ರದೇಶ ಸರ್ಕಾರವು ನೇಮಿಸಿರುವ ನೂತನ 24 ಸದಸ್ಯರಲ್ಲಿ ಸುಪ್ರೀಂ ಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಎಚ್. ಎಲ್. ದತ್ತು ಸೇರಿದಂತೆ ಕರ್ನಾಟಕದ ಮೂವರಿಗೆ ಅವಕಾಶ ಕಲ್ಪಿಸಲಾಗಿದೆ. ಬಿಜೆಪಿ ನೇತೃತ್ವದ ಹಿಂದಿನ ಸರ್ಕಾರದ ಅವಧಿಯಲ್ಲಿ ರಾಜ್ಯ ಸವಿತಾ ಸಮಾಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿದ್ದ ಬಿಜೆಪಿ ಮುಖಂಡ ನರೇಶ್ ಕುಮಾರ್ ಹಾಗೂ ದರ್ಶನ್ ಆರ್.ಎನ್. ಅವರನ್ನು ಟಿಟಿಡಿ ಆಡಳಿತ ಮಂಡಳಿ ಸದಸ್ಯರನ್ನಾಗಿ ನೇಮಿಸಲಾಗಿದೆ. 'ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಸವಿತಾ ಸಮಾಜಕ್ಕೆ ಟಿಟಿಡಿ ಆಡಳಿತ ಮಂಡಳಿಯಲ್ಲಿ ಪ್ರಾತಿನಿಧ್ಯ ಕಲ್ಪಿಸಲಾಗಿದೆ. ನಮ್ಮ ಸಮುದಾಯದ ಕುರಿತು ಇರುವ ಅಭಿಪ್ರಾಯವನ್ನು ಬದಲಿಸುವ ನಿಟ್ಟಿನಲ್ಲಿ ಸಕ್ರಿಯವಾಗಿ ಕೆಲಸ ಮಾಡುತ್ತೇನೆ' ಎಂದು ನರೇಶ್ ಕುಮಾರ್ ಪ್ರತಿಕ್ರಿಯಿಸಿದ್ದಾರೆ.

### ಗುಡುಗು ಸಹಿತ ಮಳೆ ಸಾಧ್ಯತೆ



ಇಂದು ಚಿಕ್ಕಮಗಳೂರು, ರಾಮನಗರ, ಚಾಮರಾಜನಗರ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಭಾರೀ ಮಳೆ ಅಥವಾ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಹಲವು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು, ಗದಗ ಮತ್ತು ಧಾರವಾಡ, ಚಿತ್ರದುರ್ಗ, ಬಳ್ಳಾರಿ, ದಾವಣಗೆರೆ, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ಹಗುರ ಮಳೆಯಾಗಲಿದೆ.

### ಕನ್ನಡ ಭಾಷೆಯ ಸರ್ವತೋಮುಖ ಅಭಿವೃದ್ಧಿಗೆ ರಾಜ್ಯ ಸರ್ಕಾರ ಸಂಪೂರ್ಣ ಸಹಕಾರ: ಟಿ.ರಘುಮೂರ್ತಿ

# ಕನ್ನಡ ಭಾಷೆ ನಮ್ಮ ಜೀವನಾಡಿಯಾಗಿದೆ





» ಚಳ್ಳಕೆರೆ

69ನೇ ಕನ್ನಡ ರಾಜ್ಯೋತ್ಸವ ಆಚರಣೆ ನಮ್ಮೆಲ್ಲರಿಗೂ ಹೆಮ್ಮೆಯ ಸಂಕೇತ, ರಾಷ್ಟ್ರದ ಇತಿಹಾಸದಲ್ಲಿ ಕೇವಲ ಕನ್ನಡ ಭಾಷೆಯಲ್ಲಿ ಮಾತ್ರ ಎಂಟು ಜನ ಮಹಾನ್ ಕನ್ನಡ ಶಕ್ತಿಗಳು ಜ್ಞಾನಪೀಠ ಪ್ರಶಸ್ತಿ ಪಡೆಯುವ ಮೂಲಕ ಕನ್ನಡ ಭಾಷೆಯ ಮೌಲ್ಯವನ್ನು ಹೆಚ್ಚಿಸಿದ್ದಾರೆ. ಕನ್ನಡ ಭಾಷೆ ನಮ್ಮೆಲ್ಲರ ಆಡಳಿತ ಭಾಷೆಯಾಗಿದ್ದು, ಕನ್ನಡ ಮತ್ತು ಕನ್ನಡತನವನ್ನು ಬಿಟ್ಟು ನಾವ್ಯಾರು ಬದುಕು ಸಾಧ್ಯವಿಲ್ಲವೆಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಕರ್ನಾಟಕದಲ್ಲಿ ಕನ್ನಡವನ್ನು ಉಳಿಸಿ, ಬೆಳೆಸುವ ಎಲ್ಲಾ ರೀತಿಯ ಸೌಲಭ್ಯಗಳನ್ನುಸರ್ಕಾರ ಕಲ್ಪಿಸಿದೆ. ಪ್ರಸ್ತುತ ರಾಜ್ಯದಲ್ಲಿ ಜಾರಿಯಲ್ಲಿರುವ ಐದುಗ್ಯಾರಂಟಿಗಳ ಸಹಕಾರದಿಂದ ರಾಜ್ಯದ ಜನತೆ ಬದುಕು ಕಟ್ಟಿಕೊಂಡಿದ್ದಾರೆ. ಕನ್ನಡ ಸಾಹಿತ್ಯಕ್ಕೆ ಚಳ್ಳಕೆರೆ ಕ್ಷೇತ್ರದ ಕೊಡುಗೆ ಎಂದೂ ಮರೆಯಲು ಸಾಧ್ಯವಿಲ್ಲ. ತಳುಕಿನ ತರಾಸು, ವೆಂಕಣಯ್ಯ, ಬೆಳಗೆರೆ ಕೃಷ್ಣಶಾಸ್ತ್ರಿ, ಜಾನಕಮ್ಮ, ಸಿರಿಯಜ್ಜಿ, ಜಾನಪದ ತಜ್ಞ ಮೀರಸಾಬಿಹಳ್ಳಿ ಶಿವಣ್ಣ, ಶಿವಲಿಂಗಪ್ಪ, ತಿಪ್ಪಣ್ಣಮರಿಕುಂಟೆ ಇಂತಹಮಹಾನೀಯರ ಪರಿಶ್ರಮದ ಕೊಡುಗೆಯನ್ನು ನಾವೆಂದೂ ಮರೆಯಲು ಸಾಧ್ಯವಿಲ್ಲ. ಕಳೆದ ವರ್ಷ ಇಲ್ಲಿನ ಹಿರಿಯರಂಗಕರ್ಮಿ ಪಿ.ತಿಪ್ಪೇಸ್ವಾಮಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪಡೆದರೇ, 2006ರಲ್ಲಿ ನೃತ್ಯನಿಕೇತನದ ಸುಧಾಮೂರ್ತಿ ಈ ಪ್ರಶಸ್ತಿ ಪಡೆದಿದ್ದರು. ಇಬ್ಬರು ಈ ನೆಲದ ಕನ್ನಡ ಕಟ್ಟಾಳುಗಳಿಗೆ ರಾಜ್ಯೋತ್ಸವ ಪ್ರಶಸ್ತಿ ಬಂದಿದೆ. ಹಿರಿಯ ರಾಜಕಾರಣಿ ದಿವಂಗತ ಚಿತ್ರದುರ್ಗದ ಎಸ್.ನಿಜಲಿಂಗಪ್ಪನವರು ಸಹ ಕರ್ನಾಟಕ ಏಕೀಕರಣ ಸಮಿತಿಯ ಸದಸ್ಯರಾಗಿ ಹೋರಾಟ ನಡೆಸಿದವರು. ಕನ್ನಡ ನಾಡುನುಡಿಯ ಸೇವೆಗೆ ನಾವೆಲ್ಲರೂ ಬದ್ದರಾಗೋಣವೆಂದರು.

ಧ್ವಜಾರೋಹಣ ನೆರವೇರಿಸಿ ರಾಜ್ಯೋತ್ಸವ ಸಂದೇಶ ವಾಚನ ಮಾಡಿದ ತಹಶೀಲ್ದಾರ್ ರೇಹಾನ್‌ಪಾಷ, ರಾಜ್ಯ ಸರ್ಕಾರ ಕನ್ನಡ ಭಾಷೆಯನ್ನು ಆಡಳಿತ ಭಾಷೆಯನ್ನಾಗಿ ಮಾಡುವ ಮೂಲಕ ಕನ್ನಡಿಗರ ಸ್ವಾಭಿಮಾನ ಹೆಚ್ಚಿಸಿದೆ. ರಾಜ್ಯ ಸರ್ಕಾರ ಸದಾಕಾಲ ಕನ್ನಡಿಗರ ಹಿತ ಕಾಪಾಡುವಲ್ಲಿ ಬದ್ದವಾಗಿದೆ. ನಾವೆಲ್ಲರೂ ಕನ್ನಡ ಉಳಿವಿಗಾಗಿ ಶ್ರಮೀಸೋಣವೆಂದರು.

ಪ್ರಧಾನಭಾಷಣ ಮಾಡಿದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಕರ್ನಾಟಕದಲ್ಲಿ ಕನ್ನಡ ಭಾಷೆಯ ಬೆಳವಣಿಗೆಗೆ ಎಂದೂ ಅಡ್ಡಿಬಾರದು ಎಂಬ ವಿಶ್ವಾಸ ನಮಗಿದೆ. ಅದರೂ ಸಹ ಇತ್ತೀಚೆಗೆ ಬೆಂಗಳೂರು ಸೇರಿದಂತೆ ರಾಜ್ಯದ ಪ್ರಮುಖ ನಗರಗಳಲ್ಲಿ ಐಟಿಬಿಟಿ ಕಂಪನಿಗಳು ಅಸ್ಥಿತ್ವಕ್ಕೆ ಬಂದಿದ್ದು, ಅಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡಲು ನಿರಾಕರಣೆಯಾಗುತ್ತಿದೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಕನ್ನಡ ನೆಲದಲ್ಲೇ ಎಲ್ಲಾ ಅರ್ಹತೆ ಇದ್ದರೂ ಕನ್ನಡಿಗರು ಉದ್ಯೋಗ ವಂಚಿತರಾಗುತ್ತಿರುವುದುನೋವಿನಸಂಗತಿ. ನ್ಯಾಯಾಲಯವೂ ಸೇರಿದಂತೆ ಎಲ್ಲಾ ಯೋಜನೆಗಳನ್ನುಮಾತೃಭಾಷೆಕನ್ನಡದಲ್ಲೇ ಜಾರಿಗೊಳಿಸಬೇಕು ಎಂದರು.

ಸಾಂಸ್ಕೃತಿಕ ಕ್ಷೇತ್ರದಲ್ಲಿ ಪಿ.ಬೋರಯ್ಯ, ವಿ.ಶಿವನಪ್ಪ, ಕ್ರೀಡಾಕ್ಷೇತ್ರದಲ್ಲಿ ಪಿ.ಪದ್ಮಾವತಿ, ಸಾಹಿತ್ಯ ಕ್ಷೇತ್ರದಲ್ಲಿ ನಿವೃತ್ತ ಶಿಕ್ಷಕ ಮೀರಸಾಬಿಹಳ್ಳಿ ಗುರುಮೂರ್ತಿ, ಕೃಷಿಕ್ಷೇತ್ರದಲ್ಲಿ ವಿಡಪನಕುಂಟೆಯ ಸಿದ್ದೇಶ್ವರರೆಡ್ಡಿ, ಮಾಧ್ಯಮ ಕ್ಷೇತ್ರದಲ್ಲಿ ಸಿ.ವೈ. ಗಂಗಾಧರ, ಕಂದಾಯ ಇಲಾಖೆಯ ರಾಜ್ವನಿರೀಕ್ಷಕ ಚೇತನ್‌ಕುಮಾರ್, ವೈದ್ಯ ಅಮೀತ್‌ಗುಪ್ತ, ಪಶುವೈದ್ಯ ಡಾ.ರೇವಣ್ಣ, ಸಿಡಿಪಿಒ ಇಲಾಖೆಯ ಅನ್ನಪೂರ್ಣಮ್ಮ, ಶಿಕ್ಷಣ ಇಲಾಖೆಯ ಆರ್.ಸದಾಶಿವಯ್ಯ ಇವರನ್ನು ಸನ್ಮಾನಿಸಲಾಯಿತು. ವಿವಿಧ ಶಾಲೆಗಳ ಮಕ್ಕಳು ಮನೋರಂಜನಾ ಕಾರ್ಯಕ್ರಮ ನಡೆಸಿದರು. ಆದರ್ಶ, ವಿದ್ಯಾಭಾರತಿ, ಲಿಟ್ಲಫ್ಲವರ್ ಶಾಲೆ, ಎನ್. ದೇವರಹಳ್ಳಿಶಾಲೆಯ ಮಕ್ಕಳು ಕನ್ನಡ ಹಾಡುಗಳಿಗೆ ಆಕರ್ಷಣಿಯ ನೃತ್ಯ ಪ್ರದರ್ಶಿಸಿದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಸದಸ್ಯರಾದ ಎಂ.ಜೆ.ರಾಘವೇಂದ್ರ, ಬಿ.ಟಿ.ರಮೇಶ್‌ಗೌಡ, ಸಿ.ಶ್ರೀನಿವಾಸ್, ಕೆ.ವೀರಭದ್ರಪ್ಪ, ಎಸ್.ಜಯಣ್ಣ, ವೆಂಕಟೇಶ್, ಸುಮ, ಕವಿತಾ, ನಾಮಿನಿ ಸದಸ್ಯರಾದಕೆ.ನಟರಾಜು,ಅನ್ವರ್‌ಮಾಸ್ಟರ್, ಬಡಗಿಪಾಪಣ್ಣ, ವೀರಭದ್ರಿ, ವೃತ್ತ ನಿರೀಕ್ಷಕ ರಾಜಫಕೃದ್ದೀನ್ ದೇಸಾಯಿ, ಸಮಾಜ ಕಲ್ಯಾಣಾಧಿಕಾರಿ ದೇವ್ಲಾನಾಯ್ಕ ಬಿಸಿಎಂ ಅಧಿಕಾರಿ ರಮೇಶ್, ಎಸ್ಟಿ ಅಧಿಕಾರಿ ಶಿವರಾಜು, ಕೃಷಿ ಇಲಾಖೆ ಅಧಿಕಾರಿ ಅಶೋಕ್, ಬಿಇಒ ಕೆ.ಎಸ್.ಸುರೇಶ್, ಪೌರಾಯುಕ್ತ ಜಗರೆಡ್ಡಿ, ಕಂದಾಯಾಧಿಕಾರಿ ಆರ್.ತಿಪ್ಪೇಸ್ವಾಮಿ, ಡಿ.ಶ್ರೀನಿವಾಸ್ ಮುಂತಾದವರು ಪಾಲ್ಗೊಂಡಿದ್ದರು.

## ಕನ್ನಡಕ್ಕೆ ಶಾಲಾ–ಕಾಲೇಜುಗಳಲ್ಲಿ ಹೆಚ್ಚಿನ ಒತ್ತು ಕೊಡಿ

» ಹೊಳಲ್ಕೆರೆ

ಕನ್ನಡ ನಾಡು–ನುಡಿ, ನೆಲ, ಜಲದ ಬಗ್ಗೆ ಮಕ್ಕಳಲ್ಲಿ ಚಿಕ್ಕಂದಿನಿಂದಲೆ ಅಭಿಮಾನ ಮೂಡಿಸುವ ಜವಾಬ್ದಾರಿ ಶಿಕ್ಷಕರುಗಳ ಮೇಲಿದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಪಟ್ಟಣದ ಸಂವಿಧಾನ ಸೌಧದಲ್ಲಿ ಶುಕ್ರವಾರ 69 ನೇ ಕನ್ನಡ ರಾಜ್ಯೋತ್ಸವದಲ್ಲಿ ಕನ್ನಡಾಂಭೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಏಕಿಕರಣಕ್ಕಾಗಿ ಅನೇಕ ಮಹನೀರು ಹೋರಾಡಿ ಪ್ರಾಣ ತ್ಯಾಗ ಮಾಡಿದ ಫಲವಾಗಿ ನಾವುಗಳೆಲ್ಲಾ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮಿಸುತ್ತಿದ್ದೇವೆ. ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ನಿಜಲಿಂಗಪ್ಪ, ಆಲೂರು ವೆಂಕಟರಾಯರು ಸೇರಿದಂತೆ ಅನೇಕ ಹಿರಿಯರು ಕನ್ನಡಕ್ಕೆ ಶ್ರಮಿಸಿದ್ದಾರೆ. ಅಂತಹವರನ್ನೆಲ್ಲಾ ನೆನಪಿಸಿಕೊಳ್ಳಬೇಕೆಂದರು.



ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ಸಿಕ್ಕಿದೆ. ಎಂಟು ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದಿರುವ ಭಾಷೆ ಯಾವುದಾದರೂ ಇದ್ದರೆ ಅದು ಕನ್ನಡ ಮಾತ್ರ. ಕನ್ನಡದ ಜೊತೆ ಬೇರೆ ಭಾಷೆಗಳನ್ನು ಕಲಿಯುವುದು ತಪ್ಪಲ್ಲ. ಆದರೆ ತಾಯಿಯನ್ನು ಗೌರವಿಸಿದಂತೆ ಕನ್ನಡವನ್ನು ಪ್ರತಿಯೊಬ್ಬರು ಗೌರವಿಸಬೇಕು. ಸುಂದರವಾದ ಭಾಷೆ ಕನ್ನಡಕ್ಕೆ ಶಾಲಾ–ಕಾಲೇಜುಗಳಲ್ಲಿ ಹೆಚ್ಚಿನ ಒತ್ತು ಕೊಡಬೇಕು. ಸರ್ಕಾರಿ ಶಾಲೆಗೆ ಬರುವ ಮಕ್ಕಳಿಗೆ ಸರ್ಕಾರ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಒದಗಿಸಿದೆ.

ಪುಟ ↘ 2

## ವಾಣಿ ವಿಲಾಸ ಸಾಗರ ಕೋಡಿ ಬೀಳಲು ಮೂರು ಅಡಿ ಬಾಕಿ

» ಹಿರಿಯೂರು

ಜಿಲ್ಲೆಯ ಜೀವನಾಡಿ ಜಲಾಶಯವಾದ ವಿವಿ ಸಾಗರ ಜಲಾಶಯ ಕೋಡಿ ಬೀಳಲು ಇನ್ನು 3 ಅಡಿ ಮಾತ್ರ ಬಾಕಿ.ಗುರುವಾರದ ಹೊತ್ತಿಗೆ 127 ಅಡಿ ದಾಟಿರುವ ನೀರಿನ ಮಟ್ಟ ಮತ್ತೊಮ್ಮೆ ಕೋಡಿ ಬೀಳುವ ಸಂಭ್ರಮವನ್ನು ಜಿಲ್ಲೆಯ ಜನರಿಗೆ ಒದಗಿಸುವ ಆಶಾಭಾವನೆ ಮೂಡಿಸಿದೆ. ಎತ್ತಿನಹೊಳೆ, ಭದ್ರಾ ನೀರು ನಿರಂತರವಾಗಿ ಬಂದರೆ ಇಲ್ಲವೇ ಜಲಾಶಯದ ಮೇಲ್ಭಾಗ ಮಳೆ ಸುರಿದರೆ ವಿವಿ ಸಾಗರ ಜಲಾಶಯದ ಕೋಡಿ ಬೀಳುವ ದಿನ ತುಂಬಾ ದೂರವೇನೂ ಉಳಿದಿಲ್ಲ.

ಜುಲೈ ತಿಂಗಳ ಅಂತ್ಯದಲ್ಲಿ 113.08 ರಷ್ಟಿದ್ದ ಜಲಾಶಯದ ನೀರಿನ ಮಟ್ಟ ಅ. 30 ರ ಹೊತ್ತಿಗೆ 127 ಅಡಿ ಮುಟ್ಟಿದೆ. ಕೇವಲ ನಾಲ್ಕು ತಿಂಗಳಲ್ಲಿ ಸುಮಾರು 14 ಅಡಿಯಷ್ಟು ನೀರು ಸಂಗ್ರಹವಾಗಿದ್ದು ಜಿಲ್ಲೆಯ ಜನರ ನೀರಿನ ಬವಣೆ ನೀಗಿಸಲಿದೆ.ಬರಗಾಲದ ಪ್ರದೇಶ ಎಂದೇ ಗುರುತಿಸಿಕೊಂಡಿರುವ ಈ ಭಾಗಕ್ಕೆ ವಿವಿ ಸಾಗರ ಜಲಾಶಯವೇ ಆಧಾರಸ್ಥಂಭವಾಗಿದೆ.

ಪುಟ ↘ 3

## ಪ್ರಮುಖ ಸುದ್ದಿ

### ಹಿರಿಯೂರು ತಾಲೂಕಿನ ಜನತೆಗೆ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಕಿವಿ ಮಾತು

# ಪ್ರತಿ ವರ್ಷ ಕೋಡಿ ಹರಿಸಬೇಕು ಎಂಬ ಹಠಕ್ಕೆ ಬೀಳಬಾರದು

» ಹೊಸದುರ್ಗ

2022 ರಲ್ಲಿ ವಿವಿ ಸಾಗರ ಜಲಾಶಯ ಕೋಡಿಯಿಂದ ನೀರು ಹರಿದಿದೆ. ಹಿನ್ನೀರಿನ ಜನತೆ ಸಾಕಷ್ಟು ನಷ್ಟ ಅನುಭವಿಸಿದ್ದಾರೆ. ಪ್ರತಿ ವರ್ಷ ಕೋಡಿ ಹರಿಸಬೇಕು ಎಂಬ ಹಠಕ್ಕೆ ಬೀಳಬಾರದು.ಅಧಿಕಾರಿಗಳ ಮಾತಿಗೆ ಗಮನಹರಿಸಿ, ತಾಲ್ಲೂಕಿನ ರೈತರ ಸಂಕಷ್ಟಕ್ಕೆ ಭಾಗಿಯಾಗುವುದು ನಮ್ಮೆಲ್ಲರ ಕರ್ತವ್ಯ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಕಿವಿ ಮಾತು ಹೇಳಿದರು.

ಪಟ್ಟಣದ ಪದವಿ ಕಾಲೇಜು ಆವರಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಬಾಗಿನ ಅರ್ಪಿಸುವುದಕ್ಕೆ ಜಲಾಶಯ ತುಂಬಿಸುವ ಬದಲು, ಜನೋಪಯೋಗಕ್ಕೆ ತುಂಬಿಸಿ .ಹಿರಿಯೂರು ರೈತರು ಮಾತ್ರ ನೀರು ಕಂಡು ಸುಖವಾಗಿದ್ದರೇ ಸಾಲದು, ಹಿನ್ನೀರಿನ ರೈತರಿಗೂ ಸ್ಪಂದಿಸಬೇಕು. ಈ ಗುಣ ರೈತರು ಹಾಗೂ ರಾಜಕೀಯ ನೇತಾರರಿಗೂ ಇರಬೇಕು.



ವಿವಿ ಸಾಗರದಲ್ಲಿ ದಿನೇ ದಿನೇ ನೀರಿನ ಪ್ರಮಾಣ ಅಧಿಕವಾಗುತ್ತಿದ್ದು, ಹಿನ್ನೀರಿನ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ತಂತ್ರಜ್ಞರು, ಅಧಿಕಾರಿಗಳ ಸಲಹೆ ಮೇರೆಗೆ ಕಾನೂನಾತ್ಮಕವಾಗಿ ರೈತರಿಗೆ ಶಾಶ್ವತ ಪರಿಹಾರ ನೀಡಬೇಕು. ಈ ನಿಟ್ಟಿನಲ್ಲಿ ಎಲ್ಲರ ಸಹಕಾರ ಅಗತ್ಯ ನೆಲ, ಜಲದ ವಿವಾದ ಇಂದಿಗೂ ಇದೆ. ಈ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ರಾಜಕೀಯ ನೇತಾರರು ಶ್ರಮಿಸುತ್ತಿದ್ದಾರೆ. 1897 ರಿಂದ 1907 ರವರೆಗೂ ಮೈಸೂರು ಮಹಾರಾಜರು ತಾಲ್ಲೂಕಿನಲ್ಲಿ ವಿವಿ ಸಾಗರ ನಿರ್ಮಾಣ ಮಾಡಿದರು. ಅಂದು 25 ಸಾವಿರ ಎಕರೆ ಭೂಮಿ ಕೊಟ್ಟಿದ್ದು, ಹೊಸದುರ್ಗ ರೈತರ ದೊಡ್ಡಗುಣ. ಆಗ ಕೆಲವು ಹಳ್ಳಿಗಳನ್ನು ಮಾತ್ರ ಸ್ಥಳಾಂತರಗೊಳಿಸಿ, ಸೂಕ್ತ ಜಾಗ ನೀಡಲಾಗಿದೆ. ಇನ್ನೂ ಕೆಲವರು ಸಂಕಷ್ಟದಲ್ಲಿದ್ದಾರೆ. ಜನಸಂಖ್ಯೆಗೆ ಅನುಗುಣವಾಗಿ ಭೂಮಿ ನೀಡಬೇಕಾಗಿದೆ. ವಿವಿ ಸಾಗರದಲ್ಲಿ ನೀರು 130 ಅಡಿಗಿಂತ ಹೆಚ್ಚಿನ ನೀರು ಬಂದಾಗ ಹಲವು ಪ್ರದೇಶಗಳು ನೀರು ಮುಳುಗಡೆಯಾಗುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು.

ನಮ್ಮ ಜನ
NAMMA JANA

02–11–2024 ಶನಿವಾರ
02-11-2024 Saturday



# ಕನ್ನಡಿಗರಿಗೆ ಶಿಕ್ಷಣ ಹಾಗೂ ಉದ್ಯೋಗದಲ್ಲಿ ಅವಕಾಶ ಕಲ್ಪಿಸಲು ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ ಜಾರಿ






» **ಚಿತ್ರದುರ್ಗ**

ರಾಜ್ಯದಲ್ಲಿ ಕನ್ನಡಿಗರಿಗೆ ಶಿಕ್ಷಣ ಹಾಗೂ ಉದ್ಯೋಗದಲ್ಲಿ ಉತ್ತಮ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ ಜಾರಿಗೊಳಿಸಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಜಿಲ್ಲಾಡಳಿತ ವತಿಯಿಂದ ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಶುಕ್ರವಾರ ಕನ್ನಡ ರಾಜ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವ ಸಂದೇಶ ನೀಡಿದರು.ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮದಡಿ ರಾಜ್ಯದಲ್ಲಿ ದೇಶಿಯ ಹಾಗೂ ವಿದೇಶಿಯ ಕಂಪನಿಗಳಲ್ಲಿ ಉದ್ದಿಮೆ ಸ್ಥಾಪಿಸಬೇಕಾದರೆ, ಕನ್ನಡಿಗರಿಗೆ ಕಡ್ಡಾಯ ಉದ್ಯೋಗದ ಅವಕಾಶಗಳನ್ನು ಕಲ್ಪಿಸಬೇಕು. ಅಂತಹ ಕಂಪನಿಗಳಿಗೆ ಮಾತ್ರ ಸರ್ಕಾರದಿಂದ ಉದ್ದಿಮೆ ಸ್ಥಾಪನೆಗೆ ಅನುಮತಿ ನೀಡಲಾಗುವುದು. ಕನ್ನಡ ಭಾಷೆಯ ಉಳಿವಿಗಾಗಿ ಬೆಳವಣಿಗೆಗಾಗಿ ನಮ್ಮ ಸರ್ಕಾರ ನಾನಾ ರೀತಿಯಲ್ಲಿ ಕೆಲಸ ಮಾಡುತ್ತಿದೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಕಾವಲು ಸಮಿತಿ ನೇಮಿಸಿ ಆಡಳಿತ ಭಾಷೆಯಾಗಿ ಕನ್ನಡ ಕಡ್ಡಾಯ ಮಾಡಿದೆ. ಹಾಗೆಯೇ "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಅಭಿಯಾನದಡಿ ಎಲ್ಲಾ ಸರ್ಕಾರಿ ನೌಕರರಿಗೆ ಕೆಂಪು–ಹಳದಿ ಬಣ್ಣದ ಗುರುತಿನ ಚೀಟಿಯ ಟ್ಯಾಗ್ ಧರಿಸುವಂತೆ ಸೂಚಿಸುವುದರ ಮೂಲಕ ಕನ್ನಡಕ್ಕೆ ಹೆಮ್ಮೆ ತಂದಿದೆ ಎಂದು ಹೇಳಿದರು.ಕನ್ನಡ ಭಾಷೆ ಬಾರದಿರುವ ಉದ್ಯೋಗಿಗಳಿಗೆ ಕನ್ನಡ ಕಲಿಸಲು "ಕನ್ನಡ ಕಲಿಕಾ ಘಟಕ" ವನ್ನು ಸ್ಥಾಪಿಸಿ ಸರ್ಕಾರವು ಅಗತ್ಯ ಬೋಧಕ ಸಿಬ್ಬಂದಿ ಮತ್ತು ಕಲಿಕಾ ಸಾಮಗ್ರಿಯನ್ನು ಒದಗಿಸಲು ಹಾಗೆಯೇ ಮಾಹಿತಿ ತಂತ್ರಜ್ಞಾನದಲ್ಲಿ ಕನ್ನಡ ಭಾಷೆಯ ಬಳಕೆಗಾಗಿ ಅನೇಕ ಕ್ರಮಗಳನ್ನು ಕೈಗೊಂಡಿದೆ. ಹಾಗಾಗಿ ಅಲ್ಲಿಯೂ ಕನ್ನಡ ಬಳಕೆಯಾಗುತ್ತಿದೆ ಎಂದು ಹೇಳಿದರು.

ನಮ್ಮ ಸರ್ಕಾರ ಹಿಂದಿನ ರಾಜಮಹಾರಾಜರಂತೆ ಕನ್ನಡವನ್ನು ಉಳಿಸಿ ಬೆಳೆಸಿ ಮುಂದಿನ ತಲೆಮಾರುಗಳಿಗೆ ನಮ್ಮ ಪರಂಪರೆ, ಸಂಸ್ಕೃತಿ, ಇತಿಹಾಸ ತಲುಪಿಸುವ ಕೆಲಸ ಮಾಡುತ್ತಿದೆ. ಈ ಹಿನ್ನಲೆಯಲ್ಲಿ ಕನ್ನಡ ಬೆಳೆಸಲು ಸರ್ಕಾರಕ್ಕೆ ಮಾತ್ರ ಬಿಡದೆ ಜನರೂ ಕೈ ಜೋಡಿಸಬೇಕು ಎಂದರು.

ಕನ್ನಡಕ್ಕೆ ಜಿಲ್ಲೆಯ ಕೊಡುಗೆ ಅಪಾರ: ಮೊಟ್ಟ ಮೊದಲು ಕನ್ನಡ ಸಾಮ್ರಾಜ್ಯದ ಸ್ಥಾಪನೆಗೆ ಅಡಿಪಾಯ ಹಾಕಿದ ನೆಲ ಚಿತ್ರದುರ್ಗ. ಕದಂಬರ ಮಯೂರ ವರ್ಮ ಬನವಾಸಿ ಪ್ರದೇಶದಿಂದ ಉನ್ನತ ವಿದ್ಯಾಭ್ಯಾಸಕ್ಕೆ ಕಂಚಿಗೆ ಹೋಗಿ ಅಲ್ಲಿ ತಮಿಳು ಪಲ್ಲವರಿಂದ ಅವಮಾನಿತರಾಗಿ 'ನಾನು ಒಂದು ಕನ್ನಡ ಸಾಮ್ರಾಜ್ಯವನ್ನು ಕನ್ನಡಿಗರಿಗಾಗಿ ಕಟ್ಟುತ್ತೇನೆ. ನಿಮ್ಮಂತೆ ಆಳುತ್ತೇನೆ' ಎಂದು ಪ್ರತಿಜ್ಞೆ ಮಾಡಿ ಸಾಮ್ರಾಜ್ಯ ಕಟ್ಟಲು ಬಂದಿದ್ದು, ಚಿತ್ರದುರ್ಗದ ಚಂದ್ರವಳ್ಳಿಯಲ್ಲಿ ದಟ್ಟವಾದ ಅಡವಿ ಧವಳಪ್ಪ ಗುಡ್ಡದಲ್ಲಿ ಇಲ್ಲಿನ ಕನ್ನಡಿಗರ ಸಹಾಯದಿಂದ ಸೈನ್ಯಕಟ್ಟಿ ಸಾವಿರಾರು ಸೈನಿಕರನ್ನು ಗೆರಿಲ್ಲಾ ತಂತ್ರದಿಂದ ಕಟ್ಟಿಹಾಕಲಾಯಿತು. ಇದರಿಂದಾಗಿ ಕೊನೆಗೆ ಸ್ವತಃ ಪಲ್ಲವರೇ ಇಲ್ಲಿಂದ ಇಲ್ಲಿಯವರೆಗೆ ನಿನ್ನದೇ ರಾಜ್ಯ ಎಂದು ಕೈಯಾರೆ ಕಿರೀಟಧಾರಣೆ ಮಾಡಿದರು ಎಂದು ತಿಳಿಸಿದ ಅವರು, ಅಲ್ಲಿಂದ ಉದಯವಾದ ಕನ್ನಡ ಸಾಮ್ರಾಜ್ಯಕ್ಕೆ ನಂತರ ಕದಂಬ ರಾಜರು ಕನ್ನಡ ಭಾಷೆ, ಸಂಸ್ಕೃತಿ, ಇತಿಹಾಸಕ್ಕೆ ಪ್ರೋತ್ಸಾಹ ನೀಡಿದರು. ಕನ್ನಡ ಲಿಪಿರೂಪ ಪಡೆದು ನಾಡಿನ ಅಭಿವೃದ್ಧಿಯಾಯಿತು. ಇದಕ್ಕೆ ಸಾಕ್ಷಿಯಾಗಿ ಚಂದ್ರವಳ್ಳಿಯ ದೇವಾಲಯದ ಮುಂದೆ ದೊಡ್ಡ ಬರಹದ ಶಾಸನವಿದೆ. ಹಾಗೆಯೇ ಶಾಸನ ಅತ್ಯಂತ ಪ್ರಾಚೀನಕಲೆಯೂ ಇಲ್ಲಿದೆ. ಇದುವರೆಗೆ ದೊರಕಿರುವ ಮೊದಲ ಕನ್ನಡ ಪದ್ಯ, ತಮಟಕಲ್ಲಿನ ಮೊದಲ ಶಾಸನದಲ್ಲಿದೆ. ಗುಣಮಧುರ ಎಂಬ ರಾಜನ ಗುಣಗಾನ ಮಾಡುವ ಈ ಪದ್ಯ ಕನ್ನಡದ ಭಾಷೆಯ ಶ್ರೇಷ್ಠತೆಯ ಉದಾಹಣೆಯಾಗಿದೆ. ಹೀಗೆ ಚಿತ್ರದುರ್ಗ ಜಿಲ್ಲೆಯು ಕನ್ನಡಕ್ಕೆ ಬಹುದೊಡ್ಡ ಕೊಡುಗೆ ನೀಡಿದೆ ಎಂಬುದು ಹಾಗೂ ಅದರ ವಾರಸುದಾರರು ನಾವು ಎಂಬುದು ನಮಗೆ ಅಭಿಮಾನ ಪಡುವಂಥದ್ದಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ: ಚಿತ್ರದುರ್ಗ ನಗರದ ವಾಸವಿ ಸಮೂಹ ಶಾಲೆ, ಪಾರ್ಶ್ವನಾಥ ಶಾಲೆ ಹಾಗೂ ದೊಡ್ಡಸಿದ್ದವ್ವನಹಳ್ಳಿಯ ಜ್ಞಾನಪೂರ್ಣ ಶಾಲೆಯ ವಿದ್ಯಾರ್ಥಿಗಳು ಕನ್ನಡ ನಾಡು–ನುಡಿ ಸಂಸ್ಕೃತಿ ಹಾಗೂ ಮಹತ್ವ ಸಾರುವಂತಹ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ: ಕನ್ನಡ ರಾಜ್ಯೋತ್ಸವದ ಅಂಗವಾಗಿ ಜಿಲ್ಲಾಡಳಿತದ ವತಿಯಿಂದ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮೊಳಕಾಲ್ಮುರು ತಾಲ್ಲೂಕಿನ ಸಿದ್ದಯ್ಯನಕೋಟೆ ಪಿ.ಆರ್. ಕಾಂತರಾಜ್ ಸೇರಿದಂತೆ 29 ಮಂದಿ ಸಾಧಕರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸನ್ಮಾನಿಸಿದರು.

ಕನ್ನಡಾಂಭೆಗೆ ನುಡಿನಮನ: ಕರ್ನಾಟಕಕ್ಕೆ 50ರ ಸಂಭ್ರಮಾಚರಣೆ ಹಿನ್ನೆಲೆಯಲ್ಲಿ ನಾಡಿನ ಹೆಸರಾಂತ ಕವಿಗಳು ರಚಿಸಿರುವ ಗೀತೆಗಳನ್ನು ರಾಜ್ಯೋತ್ಸವ ಸಮಾರಂಭದಲ್ಲಿ ಜಿಲ್ಲೆಯ ಕಲಾವಿದರು ಹಾಡಿದರು.

ಕುವೆಂಪು ರಚಿತ "ಎಲ್ಲಾದರು ಇರು ಎಂತಾದರು ಇರು", ದ.ರಾ.ಬೇಂದ್ರ ರಚಿಸಿರುವ "ಒಂದೇ ಒಂದೇ ಕರ್ನಾಟಕ ಒಂದೇ", ಸಿದ್ದಯ್ಯ ಪುರಾಣಿಕರು ರಚಿಸಿರುವ "ಹೊತ್ತಿತೋ ಹೊತ್ತಿತು ಕನ್ನಡದ ದೀಪ", ಚನ್ನವೀರ ಕಣವಿ ಅವರು ಬರೆದಿರುವ "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಹಾಗೂ ನಾಗರಹಾವು ಚಲನಚಿತ್ರದ ಕನ್ನಡ ನಾಡಿನ ವೀರರ ಮಣಿಯ ಗೀತೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಲಾವಿದ ಮುರಾರ್ಜಿ ಹಾಗೂ ಕಲಾವಿದರು ತಂಡವು ಗೀತ ಗಾಯನ ಪ್ರಸ್ತುತ ಪಡಿಸಿತು.

ಕಾರ್ಯಕ್ರಮದಲ್ಲಿ ಸಂಸದ ಗೋವಿಂದ ಎಂ ಕಾರಜೋಳ, ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್.ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ರಾಘವೇಂದ್ರ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು ಇದ್ದರು.









## ಪ್ರಮುಖ ಸುದ್ದಿ

# ಕನ್ನಡ ಸಾಹಿತ್ಯ ಸಂಪತ್ತನ್ನು ಸದ್ಬಳಕೆ ಮಾಡಿಕೊಳ್ಳಿ

» **ನಮ್ಮಜನ ಸಮಾಚಾರ**

ಚಳ್ಳಕೆರೆ:ಕನ್ನಡ ಭಾಷೆಯ ಅಸ್ಮಿತೆ ಉಳಿಯಬೇಕೆಂದರೆ ದೈನಂದಿನ ಬದುಕಿನಲ್ಲಿ ಕನ್ನಡ ಮತ್ತು ಅಗಾಧವಾದ ಕನ್ನಡ ಸಾಹಿತ್ಯ ಸಂಪತ್ತನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ನಿವೃತ್ತ ತಹಶೀಲ್ದಾರ್ ಎನ್. ರಘುಮೂರ್ತಿ ಹೇಳಿದರು

ಅವರು ಚಳ್ಳಕೆರೆ ನಗರದ ಹೊಂಗಿರಣ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.



ಬದುಕಿಗೆ ಮೌಲ್ಯವೆನಿಸುವ ಅಗಾಧವಾದ ಭಾಷಾ ಸಂಪತ್ತು ಕನ್ನಡ ಭಾಷೆಯಲ್ಲಿದೆ ಜೀವನೋತ್ಕರ್ಷಕ್ಕೆ ಬೇಕಾಗಿರುವಂತ ಎಲ್ಲ ಅಂಶಗಳನ್ನು ಕುವೆಂಪು ಡಿವಿಜಿ ಬೇಂದ್ರೆ ಹೇಳಿ ಅವರ ಕೃತಿಗಳಲ್ಲಿ ದಾಖಲಿಸಿದ್ದಾರೆ ಮತ್ತು ಅದ್ಭುತವಾದಂತಹ ಕಾದಂಬರಿಗಳನ್ನು ಸಮಾಜಕ್ಕೆ ಸಮರ್ಪಣೆ ಮಾಡಿದ್ದಾರೆ ದಾಸ ಸಾಹಿತ್ಯ ವಚನ ಸಾಹಿತ್ಯ ಮತ್ತು ಶರಣ ಸಾಹಿತ್ಯ ಕನ್ನಡ ಭಾಷೆಯನ್ನು ಶ್ರೀಮಂತಗೊಳಿಸಿದೆ ಪಂಪ ರನ್ನ ಜನ್ನ ರಾಘವಾಂಕ ಕುಮಾರವ್ಯಾಸ ಇವರ ಮಹಾಕಾವ್ಯಗಳು ಬದುಕಿಗೆ ಜೀವಾಮೃತವನ್ನು ನೀಡಿವೆ ಇನ್ನು ಕನ್ನಡ ನಾಡಿನಲ್ಲಿ ಇರುವಂತಹ ನದಿಗಳು ಅಭಯಾರಣ್ಯಗಳು ಗಿರಿ ಶೃಂಗ ಪರ್ವತ ಶ್ರೇಣಿಗಳ ಜೊತೆ ಕನ್ನಡ ಭಾಷೆ ತನ್ನ ಮೆರಗನ್ನು ಹೆಚ್ಚಿಸಿಕೊಂಡಿದೆ ಡಿ ವಿ ಗುಂಡಪ್ಪನವರ ಮಂಕುತಿಮ್ಮನ ಕಗ್ಗಗಳು ಇಂದಿನ ವಿದ್ಯಾರ್ಥಿಗಳಿಗೆ ಮತ್ತು ಶೈಕ್ಷಣಿಕ ಬೆಳವಣಿಗೆಗೆ ದಾರಿ ದೀಪವಾಗಬೇಕಿದೆ ಇತಿಹಾಸ ಇರುವ ಕನ್ನಡ ಭಾಷೆ ಪರಂಪರೆ ವಿಶ್ವದ ಯಾವುದೇ ಭಾಗದಲ್ಲಿ ನೋಡಲು ಸಾಧ್ಯವಿಲ್ಲ ಇಂತಹ ಅದ್ಭುತವಾದ ಮತ್ತು ಅಪರೂಪವಾದ ಕನ್ನಡ ಭಾಷೆಯನ್ನು ಬಳಸುವ ನಿಟ್ಟಿನಲ್ಲಿ ಇಡೀ ಶಿಕ್ಷಕ ಸಮೂಹ ಸಂಕಲ್ಪ ಮಾಡಬೇಕಿದೆ ಶತಶತಮಾನಗಳು ಮುಂದೆ ಗತಿಸಿದರು ಕೂಡ ಈ ಕನ್ನಡ ಭಾಷೆ ಸೊಗಡು ಮತ್ತು ಪ್ರಭುತ್ವ ಕಡಿಮೆಯಾಗುವುದಿಲ್ಲ ಇಂತಹ ನಾಡಿನಲ್ಲಿ ಜನ್ಮ ತಾಳಿದ ಕನ್ನಡಿಗರದ ನಾವೆಲ್ಲರೂ ಕೂಡ ಹೆಮ್ಮೆ ಪಡಬೇಕು ಎಂದು ಹೇಳಿದರು.

ಹೊಂಗಿರಣ ವಿದ್ಯಾ ಸಂಸ್ಥೆಯ ಗೌರವಾಧ್ಯಕ್ಷರಾದಂತ ನಾಗಣ್ಣ ಮಾತನಾಡಿ ಕನ್ನಡ ಪರಂಪರೆ ಮತ್ತು ಇತಿಹಾಸದ ಬಗ್ಗೆ ನಾವೆಲ್ಲರೂ ಸಂಭ್ರಮ ಪಡಬೇಕು ಎಂದು ಹೇಳಿದರು ಮತ್ತು ಸಂಸ್ಥೆಯ ಅಧ್ಯಕ್ಷರಾದಂತಹ ದಯಾನಂದ ಅವರು ಮಾತನಾಡಿ ಕನ್ನಡ ಭಾಷೆಯನ್ನು ಬಳಸಲು ಮತ್ತು ವೈಭವ್ಯಕರಿಸಲು ಎಂತದೆ ತ್ಯಾಗಕ್ಕೂ ಕನ್ನಡಿಗರು ಸಿದ್ದರಿರಬೇಕು ಇಂತಹ ಹಬ್ಬಗಳು ವರ್ಷ ಪೂರ್ತಿ ನಡೆಯಬೇಕು ಎಂದು ಹೇಳಿದರು ಪ್ರಾಂಶುಪಾಲರಾದಂತ ಪ್ರಸನ್ನ ಶಾಲಾಡಳಿತ ಮಂಡಳಿಯ ಎಲ್ಲಾ ಸದಸ್ಯರು ಮುಖ್ಯಪ್ಪ ದೇವ್ರು ಸಹ ಶಿಕ್ಷಕರು ಉಪಸ್ಥಿತರಿದ್ದರು

## ಫಾಸ್ಟ್ ನ್ಯೂಸ್

### ಕನ್ನಡಕ್ಕೆ ಶಾಲಾ-ಕಾಲೇಜುಗಳಲ್ಲಿ ಹೆಚ್ಚಿನ ಒತ್ತು ಕೊಡಿ: ಚಂದ್ರಪ್ಪ

» **ಮೊದಲ ಪುಟದಿಂದ**

ಹೊಳಲ್ಕೆರೆ ಕ್ಷೇತ್ರದಲ್ಲಿ ಸರ್ಕಾರಿ ಶಾಲೆಯ ಬಡ ಮಕ್ಕಳಿಗೆ ಅನುಕೂಲವಾಗಲಿ ಎನ್ನುವ ಕಾರಣಕ್ಕಾಗಿ ಸ್ವಂತ ಖರ್ಚಿನಿಂದ ಬಸ್ ವ್ಯವಸ್ಥೆ ಕಲ್ಪಿಸಿದ್ದೇನೆ. ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳಾಗಿದೆ. ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಶಾಸಕ ಡಾ.ಎಂ.ಚಂದ್ರಪ್ಪ ಭರವಸೆ ನೀಡಿದರು.

ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಮೂರ್ತಿ, ಕನ್ನಡ ರಕ್ಷಣಾ ವೇದಿಕೆ ತಾಲ್ಲೂಕು ಅಧ್ಯಕ್ಷ ಪಿ.ಹನುಮಂತಪ್ಪ, ತಹಶೀಲ್ದಾರ್ ಬೀಬಿ ಫಾತಿಮ, ತಾಲ್ಲೂಕು ಪಂ ಚಾಯಿತಿ ಕಾರ್ಯನಿರ್ವಹಣಾಧಿಕಾರಿ ವಿಶ್ವನಾಥ್, ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀನಿವಾಸ್ ಹೆಚ್. ಪುರಸಭೆ ಸದಸ್ಯರುಗಳಾದ ಆರ್.ಎ.ಅಶೋಕ್, ಮುರುಗೇಶ್, ಮಲ್ಲಿಕಾರ್ಜುನಸ್ವಾಮಿ, ತಾಲ್ಲೂಕು ಮಟ್ಟದ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ವಿದ್ಯಾರ್ಥಿಗಳು ಕನ್ನಡ ರಾಜ್ಯೋತ್ಸವದಲ್ಲಿ ಪಾಲ್ಗೊಂಡಿದ್ದರು.

### ರಸ್ತೆ ಗುಂಡಿ ದುರಸ್ತಿಗೆ ಪೈರು ನಾಟಿ ಮಾಡಿ ಪ್ರತಿಭಟನೆ



» **ಪರಶುರಾಂಪುರ**

ಗ್ರಾಮದ ಮುಖ್ಯ ವೃತ್ತದ ರಸ್ತೆಯಲ್ಲಿನ ಗುಂಡಿಗೆ ಸಸಿಗಳನ್ನು ನಾಟಿ ಮಾಡುವುದರ ಮೂಲಕ ದುರಸ್ತಿ ಮಾಡುವಂತೆ ವಿವಿಧ ಸಂಘ ಸಂಸ್ಥೆಗಳ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಶುಕ್ರವಾರ ಪ್ರತಿಭಟನೆ ನಡೆಸಿದರು. ಕೋರ್ಲಕುಂಟೆ ರಸ್ತೆಯ ಗುಂಡಿಗೆ ಪೈರು ನಾಟಿ ಮಾಡುವ ಮೂಲಕ ವಿನೂತನ ಪ್ರತಿಭಟನೆಗೆ ಮುಂದಾದ ಪ್ರತಿಭಟನಾಕಾರರು ರಸ್ತೆಯ ಬಹಳ ದಿನಗಳಿಂದಲೂ ಕೆಸರು ಗದ್ದೆಆದರೂ, ಅಧಿಕಾರಿಗಳು ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ನೆರೆ ಸೀಮಾಂಧ್ರ,ಜಾಜೂರ ಮಾರ್ಗದ ರಸ್ತೆ ಸೇರಿದಂತೆ ಮುಖ್ಯ ರಸ್ತೆಗಳೆಲ್ಲಿ ಮಳೆಯಿಂದ ಹೊಂಡಗಳಂತಾಗಿವೆ. ಮಳೆ ಬಂದರೆ, ರಸ್ತೆಗಳೆಲ್ಲ ಕೆಸರುಮಯವಾಗುತ್ತದೆ. ಪಾದಚಾರಿಗಳು, ದ್ವಿಚಕ್ರ ವಾಹನ ಸವಾರರು, ವಯೋವೃದ್ಧರು, ಹಿರಿಯ ನಾಗರಿಕರು ಹಾಗೂ ಶಾಲಾ ಮಕ್ಕಳು ಇಂತಹ ಈ ರಸ್ತೆಯಲ್ಲಿ ಓಡಾಡುವುದಕ್ಕೆ ಹರಸಾಹಸ ಪಡಬೇಕಾಗಿದೆ. ರಸ್ತೆಗಳು ಈ ರೀತಿಯಾಗಲು ಸಂಬಂಧ ಪಟ್ಟ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿದರು. ಗುಂಡಿಯ ಅವ್ಯವಸ್ಥೆ ಆಗಿ ನಾಗರಿಕರಿಗೆ ತೊಂದರೆ ಆಗುತ್ತಿರುವುದು ಗೊತ್ತಿದ್ದರೂ ನಾಗರಿಕರಸ ಸಮಸ್ಯೆಗೆ ಯಾರು ಸ್ಪಂದಿಸುತ್ತಿಲ್ಲ ಎಂದು ದೂರಿದರು.ಕೂಡಲೇ ರಸ್ತೆ ಗುಂಡಿಗಳ ದುರಸ್ತಿ ಕಾರ್ಯ ಕೈಗೊಳ್ಳಬೇಕು. ಮಳೆ ಬಂದಾಗ ರಸ್ತೆಗಳಲ್ಲಿ ನೀರು ನಿಲ್ಲದಂತೆ ಮುಂಜಾಗ್ರತೆ ವಹಿಸಬೇಕು ಎಂದು ಆಗ್ರಹಿಸಿದರು. ಈ ವೇಳೆಯಲ್ಲಿ ಶ್ರೀಕೃಷ್ಣಪ್ಪ,ರುದ್ರಣ್ಣ,ಅಂಜಿ ನಿಮ್ಮ,ಲಕ್ಷ್ಮಕ್ಕ,ರಾಜಮ್ಮ, ರವಿಕುಮಾರ್, ಗೌಡ, ಕಿಶೋರ್ ಸೇರಿದಂತೆ ಸಾರ್ವಜನಿಕರು, ರೈತ ಸಂಘದ ಜತೆ ಇನ್ನಿತರೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಗೋಪನಹಳ್ಳಿ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ: ಪ್ರಕರಣ ದಾಖಲು

» **ಚಳ್ಳಕೆರೆ**

ಗ್ರಾಮೀಣ ಭಾಗದ ಅಂಗಡಿ, ಹೋಟೆಲ್‌ಗಳಲ್ಲಿ ಅಕ್ರಮಮದ್ಯ ಮಾರಾಟ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ತಿಳಿಸಿದರು. ಅವರು, ಪತ್ರಿಕೆಗೆ ಮಾಹಿತಿ ನೀಡಿ, ತಾಲ್ಲೂಕಿನ ಗೋಪನಹಳ್ಳಿ ಗ್ರಾಮದಲ್ಲಿ ಬೆಳಗ್ಗೆ 11ರ ಸಮಯದಲ್ಲಿ ಸಾರ್ವಜನಿಕ ಮಾಹಿತಿ ಆಧರಿಸಿ ಗ್ರಾಮದ ಪ್ರದೀಪ್‌ಕುಮಾರ್ ಹೋಟೆಲ್‌ನಲ್ಲಿ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದನ್ನು ತಡೆದು ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ. ಮತ್ತೊಂದು ಪ್ರಕರಣದಲ್ಲಿ ಅದೇ ಗ್ರಾಮದ ರಾಜಣ್ಣ ಎಂಬುವವರ ಚಿಲ್ಲರೆ ಅಂಗಡಿಯಲ್ಲಿ ಕಾನೂನು ಬಾಹಿರವಾಗಿ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದು, ಅಕ್ರಮ ಮದ್ಯ ವಶಪಡಿಸಿಕೊಂಡು ಅವರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ ಎಂದು ಎಎಸ್‌ಐ ಶಿವಣ್ಣ ತಿಳಿಸಿದ್ದಾರೆ.

### ಪಿಂಚಣಿ ಅದಾಲತ್

» **ತುಮಕೂರು**

ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ನವೆಂಬರ್ 4ರಂದು ಜಿಲ್ಲೆಯ 6 ಗ್ರಾಮ ಪಂಚಾಯತಿಗಳಲ್ಲಿ ಪಿಂಚಣಿ ಅದಾಲತ್ ಅನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ. ಈ ಅದಾಲತ್‌ನಲ್ಲಿ ಪಿಂಚಣಿಗೆ ಸಂಬಂಧಿಸಿದಂತೆ ಫಲಾನುಭವಿಗಳ ಕುಂದು–ಕೊರತೆಗಳನ್ನು ಆಲಿಸಿ ಪರಿಹರಿಸಲು ಕ್ರಮ ಕೈಗೊಳ್ಳಲಾಗುವುದು.

## ಫಾಸ್ಟ್ ನ್ಯೂಸ್

### ಬ್ಯಾಂಕ್‌ಗಳ ಡಿಜಿಟಲೀಕರಣ ಆರ್ಥಿಕ ಅಭಿವೃದ್ಧಿಗೆ ಪ್ರೇರಕ




» **ಚಳ್ಳಕೆರೆ**

ರಾಷ್ಟ್ರವನ್ನು ಆರ್ಥಿಕವಾಗಿ ಅಭಿವೃದ್ಧಿಪಥದತ್ತ ಕೊಂಡೊಯುವ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರಮೋದಿ ಬ್ಯಾಂಕ್ ವ್ಯವಹಾರಗಳಲ್ಲೂ ಸಹ ಡಿಜಿಟಲ್ ವ್ಯವಸ್ಥೆಯನ್ನು ಜಾರಿಗೆ ತಂದಿದ್ದು ಮಹಿಳೆಯರು ಇದರ ಪೂರ್ಣಪ್ರಮಾಣದ ಪ್ರಯೋಜನ ಪಡೆದು ಆರ್ಥಿಕ ಅಭಿವೃದ್ಧಿಗೆ ಪ್ರೇರಕ ಶಕ್ತಿಯಾಗಬೇಕೆಂದು ಕರ್ನಾಟಕ ಗ್ರಾಮೀಣ ಬ್ಯಾಂಕ್‌ನ ವಲಯ ವ್ಯವಸ್ಥಾಪಕ ಎಂ.ನಾಗರಾಜು ತಿಳಿಸಿದರು. ಅವರು, ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದ ಗ್ರಂಥಾಲಯ ಆರವಣದಲ್ಲಿ ಬ್ಯಾಂಕ್‌ಗಳ ವ್ಯವಹಾರದಲ್ಲಿ ಸ್ವಸಹಾಯ ಸಂಘದ ಮಹಿಳೆಯರಿಗೆ ಡಿಜಿಟಲ್ ಸಾಕ್ಷರತೆ ಜಾಗೃತಿ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಇಂದು ರಾಜ್ಯವೂ ಸೇರಿದಂತೆ ಎಲ್ಲೆಡೆ ಬ್ಯಾಂಕ್‌ನ ಎಲ್ಲಾ ವ್ಯವಹಾರಗಳನ್ನು ಡಿಜಿಟಲೀಕರಣ ಮಾಡಲಾಗಿದೆ. ಇದರಿಂದ ಕಡಿಮೆ ಅವಧಿಯಲ್ಲಿ ಬ್ಯಾಂಕ್ ವ್ಯವಹಾರಗಳನ್ನು ಪೂರೈಸಬಹುದಾಗಿದೆ. ವಿಶೇಷವಾಗಿ ಮಹಿಳೆಯರು ಬ್ಯಾಂಕ್ ವ್ಯವಹಾರದ ಬಗ್ಗೆ ದೂರವಾಣಿ ಕರೆಗಳನ್ನು ಸ್ವೀಕರಿಸಿ ಮಾಹಿತಿ ನೀಡಬಾರದು. ಕೆಲವರು ನಿಮ್ಮಿಂದಲೇ ಮಾಹಿತಿ ಪಡೆದು ನಿಮ್ಮ ಹಣಕ್ಕೆ ಕನ್ನಹಾಕುತ್ತಾರೆ. ಇದರಿಂದ ಹೆಚ್ಚು ನಷ್ಟವಾಗುತ್ತದೆ ಆದ್ದರಿಂದ ಮಹಿಳೆಯರು ಹೆಚ್ಚು ಜಾಗೃತಿಯಿಂದ ಇರಬೇಕು ಎಂದರು. ಬ್ಯಾಂಕ್ ವ್ಯವಸ್ಥಾಪಕ ಸತ್ಯರಂಜನ್ ಪ್ರಾಸ್ತಾವಿಕವಾಗಿ ಮಾತನಾಡಿ, ಬ್ಯಾಂಕ್‌ನ ಎಲ್ಲಾ ವ್ಯವಹಾರಗಳು ಡಿಜಿಟಲೀಕರಣಗೊಂಡಿದ್ದರಿಂದ ಸುಲಭವಾಗಿ ಬ್ಯಾಂಕ್ ಕೆಲಸ ಮಾಡಬಹುದು. ಇದರಿಂದ ಪ್ರತಿಯೊಂದು ವ್ಯವಹಾರವೂ ಪಾರದರ್ಶಕವಾಗಿರುತ್ತದೆ. ಮಹಿಳೆಯರು ವಿಶೇಷವಾಗಿ ಸ್ವಸಹಾಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವವರು ಬ್ಯಾಂಕ್‌ನ ಡಿಜಿಟಲೀಕರಣದ ಬಗ್ಗೆ ಹಚ್ಚು ಮಾಹಿತಿ ಪಡೆದಿರಬೇಕು ಎಂದರು.

ಮೈರಾಡ ಅಧಿಕಾರಿ ಸಿ.ಎಸ್.ಗೌಡ, ತರಬೇತಿ ಅಧಿಕಾರಿ ಶಿವಕುಮಾರ್, ಸಂಗಮಿತ್ರ ಸಂಸ್ಥೆಯ ವಲಯ ವ್ಯವಸ್ಥಾಪಕ ಸುನೀಲ್‌ಕುಮಾರ್, ಮೇಲ್ವಿಚಾರಕ ಆರ್.ಗಾದ್ರಿಪಾಲಯ್ಯ, ವೀಣಾ, ಪಾಲಾಕ್ಷಿ, ಬಿ.ವೇದ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಕನ್ನಡ ಸರ್ವತೋಮುಖ ಬೆಳವಣಿಗೆಗೆ ಎಲ್ಲರ ಸಹಕಾರ ಅಗತ್ಯ: ಕೆ.ತಿಮ್ಮಯ್ಯ



» **ಚಳ್ಳಕೆರೆ**

ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ 69ನೇಕನ್ನಡರಾಜ್ಯೋತ್ಸವವನ್ನುತಾಯಿಭುವನೇಶ್ವರ ಭಾವಚಿತ್ರಕ್ಕೆಪುಷ್ಪನಮನಸಲ್ಲಿಸುವಮೂಲಕಚಾಲನೆ ನೀಡಿ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು ಎಂದು ಪ್ರಾಂಶುಪಾಲ ಕೆ.ತಿಮ್ಮಯ್ಯ ತಿಳಿಸಿದರು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಕನ್ನಡ ರಾಜ್ಯೋತ್ಸವ ಆಚರಣೆ ನಮ್ಮೆಲ್ಲರ ಆತ್ಮಾಭಿಮಾನದ ಸಂಕೇತವಾಗಿದೆ. ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಿದ್ದು, ನಾವೆಲ್ಲರೂ ಕನ್ನಡವನ್ನು ಮತ್ತಷ್ಟು ಎತ್ತರಕ್ಕೆ ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ಸರ್ಕಾರ ಕನ್ನಡವನ್ನೇ ಆಡಳಿತ ಭಾಷೆಯನ್ನಾಗಿ ಮಾಡುವ ಮೂಲಕ ಸರ್ಕಾರ ಎಲ್ಲಾ ವ್ಯವಹಾರಗಳು ಸುಲಲಿತವಾಗಿ ಕನ್ನಡದಲ್ಲಿ ನಡೆಯುತ್ತಿವೆ. ಯಾವುದೇ ಸಂದರ್ಭದಲ್ಲೂ ನಮ್ಮ ಭಾಷೆಯ ಮೇಲೆ ಆಗುವ ಅನ್ಯಾಯದ ವಿರುದ್ಧ ಹೋರಾಟ ನಡೆಸಬೇಕು ಎಂದರು. ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ ಪ್ರಾಸ್ತಾವಿಕವಾಗಿ ಮಾತನಾಡಿ, ಕನ್ನಡ ರಾಜ್ಯೋತ್ಸವ ಆಚರಣೆ ಎಲ್ಲರಿಗೂ ಹೆಮ್ಮೆ ಇರುವ ವಿಷಯವಾಗಿದೆ. ಕನ್ನಡವನ್ನು ಉಳಿಸಿಬೆಳೆಸುವ ನಿಟ್ಟಿನಲ್ಲಿ ನಾವೆಲ್ಲರೂ ಸಾಕಷ್ಟು ಪರಿಶ್ರಮ ವಹಿಸಬೇಕು. ನಮ್ಮೆಲ್ಲರ ಮೊದಲ ಆದ್ಯತೆ ಕನ್ನಡ ಭಾಷೆಗೆ ಇರಬೇಕು. ಸಾವಿರಾರು ವರ್ಷಗಳ ಇತಿಹಾಸದ ಕನ್ನಡ ಭಾಷೆ ಕನ್ನಡಿಗರಿಗೆ ಗುಣಾತ್ಮಕ ಬದುಕು ನೀಡುವಲ್ಲಿ ಯಶಸ್ವಿಯಾಗಿದೆ ಎಂದರು. ಉಪನ್ಯಾಸಕರಾದ ವಸಂತಕುಮಾರ್, ಪುಷ್ಪಲತಾ, ಲಲಿತಮ್ಮ, ಕೆ.ವಿ.ಚಂದ್ರಶೇಖರ್, ನಾಗಭೂಷಣ್, ಎಂ.ಶ್ರೀನಿವಾಸ್, ಅಭೀಬುಲ್ಲಾ, ಕುಮಾರಸ್ವಾಮಿ, ಪುಟ್ಟರಂಗಪ್ಪ, ಜಬೀವುಲ್ಲಾ, ನಾಗರಾಜಬೆಳಗಟ್ಟ, ಹೀನಾಕೌಸರ್, ಜಗದೀಶ್, ರವಿಕುಮಾರ್, ಚಂದ್ರಶೇಖರ್ ಮುಂತಾದವರು ಉಪಸ್ಥಿತರಿದ್ದರು.

## ಐತಿಹಾಸಿಕ ಕೋಟೆ ನಗರಿಯಲ್ಲಿ ಕನ್ನಡ ಕಲರವ

# ಜನರ ಮನಸೆಳದ ಆಕರ್ಷಕ ಸ್ತಬ್ಧಚಿತ್ರ ಮೆರವಣಿಗೆ

» **ಚಿತ್ರದುರ್ಗ**

ಕನ್ನಡ ರಾಜ್ಯೋತ್ಸವ ಅಂಗವಾಗಿ ಶುಕ್ರವಾರ ಆಯೋಜಿಸಲಾದ ಸ್ತಬ್ಧಚಿತ್ರ ಮೆರವಣಿಗೆಗೆ ನಗರದ ನೀಲಕಂಠೇಶ್ವರ ದೇವಸ್ಥಾನದ ಬಳಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ತಾಯಿ ಭುವನೇಶ್ವರಿ ಭಾವಚಿತ್ರ ಪುಷ್ಪ ನಮನ ಸಲ್ಲಿಸಿ ಚಾಲನೆ ನೀಡಿದರು.

ಆಕರ್ಷಕ ಸ್ತಬ್ಧಚಿತ್ರ ಮೆರವಣಿಗೆ

ನಗರದಲ್ಲಿ 69ನೇ ಕನ್ನಡ ರಾಜ್ಯೋತ್ಸವದ ಕಲರವವನ್ನು ಸ್ತಬ್ಧಚಿತ್ರ ಮೆರವಣಿಗೆ ಮೂಡಿಸಿತು. 'ಹೊನ್ನ ಬಿತ್ತೇವು ಹೊಲಕೆಲ್ಲಾ' ಎಂಬ ನಾಣ್ನುಡಿಯಂತೆ ಜೋಡೆತ್ತುಗಳೊಂದಿಗೆ ಹೊಲದಲ್ಲಿ ಬಿತ್ತನೆ ಮಾಡುತ್ತಿರುವ ರೈತನ ಪ್ರತಿಮೆ ಇರುವ ಕೃಷಿ ಇಲಾಖೆಯ ಸ್ತಬ್ಧಚಿತ್ರ ಮೆರವಣಿಗೆಯಲ್ಲಿ ಜನರ ಗಮನ ಸೆಳೆಯಿತು.

ಕನ್ನಡಗರ ಅಸ್ಮಿತೆ ಹಣತೆ ಹಚ್ಚಿ ವಿಶಾಲ ಕನ್ನಡ ಸಾಮ್ರಾಜ್ಯ ಸ್ಥಾಪನೆಗೆ ನಾಂದಿ ಹಾಡಿದ ಕದಂಬ ರಾಜ ಮಯೂರ ವರ್ಮನ ಪುತ್ಥಳಿ ಜೊತೆಗೆ, ಜಿಲ್ಲೆಯ ತೋಟಗಾರಿಕೆ ಬೆಳೆಗಳ ಮಾಹಿತಿ ನೀಡುವ ತೋಟಗಾರಿಕೆ ಇಲಾಖೆ ಸ್ತಬ್ಧಚಿತ್ರ ನೋಡುಗರಲ್ಲಿ ಕನ್ನಡ ಅಭಿಮಾನವನ್ನು ಮೂಡಿಸಿತು.

ಮಹಿಳೆಯರ ಸಬಲೀಕರಣಕ್ಕೆ ಇಂಬಾಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗೃಹಲಕ್ಷ್ಮೀ ಹಾಗೂ ತಾಯಿ ಭುವನೇಶ್ವರಿ ಭಾವಚಿತ್ರದೊಂದಿಗೆ ಪುಷ್ಪಾಲಂಕೃತಗೊಂಡ ಕೆ.ಎಸ್.ಆರ್.ಟಿ.ಸಿ ಶಕ್ತಿ ಸ್ತಬ್ಧಚಿತ್ರಗಳು ಯೋಜನೆಗಳ ಮಹತ್ವ ಸಾರಿದವು.






ಪ್ರಥಮ ಬಹುಮಾನಕ್ಕೆ ಭಾಜವಾದ ಸಾರಿಗೆ ಇಲಾಖೆ ಸ್ತಬ್ಧಚಿತ್ರ:

ಸಾರಿಗೆ ಇಲಾಖೆಯ ಪ್ರಾದೇಶಿಕ ಕಚೇರಿಯಿಂದ ರಸ್ತೆ ಸುರಕ್ಷತೆ ಹಾಗೂ ಬ್ಯಾಟರಿ ಚಾಲಿತ ವಿದ್ಯುತ್ ವಾಹನಗಳ ಬಳಕೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಸ್ತಬ್ಧಚಿತ್ರ ಎಲ್ಲರ ಮೆಚ್ಚುಗೆ ಗಳಿಸುವುದರೊಂದಿಗೆ ಪ್ರಥಮ ಬಹುಮಾನಕ್ಕೆ ಭಾಜವಾಯಿತು. ತೋಟಗಾರಿಕೆ ಹಾಗೂ ಕೆ.ಎಸ್.ಆರ್.ಟಿ ಸ್ತಬ್ಧಚಿತ್ರಗಳು ಅನುಕ್ರಮವಾಗಿ ದ್ವಿತಿಯ ಹಾಗೂ ತೃತೀಯ ಬಹುಮಾನ ಗಳಿಸಿದವು. ಶಿಕ್ಷಣ ಹಾಗೂ ಕೃಷಿ ಇಲಾಖೆ ಸ್ತಬ್ಧಚಿತ್ರಗಳು ಸಮಾದಾನಕರ ಬಹುಮಾನ ಪಡೆದವು. ಜಿಲ್ಲಾ ಕೈಗಾರಿಕೆ ತರಬೇತಿ ಕೇಂದ್ರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅರಣ್ಯ, ಪ್ರವಾಸೋದ್ಯಮ ಇಲಾಖೆಗಳ ಸ್ತಬ್ಧಚಿತ್ರಗಳು ಸರ್ಕಾರದ ಯೋಜನೆಗಳನ್ನು ಪ್ರಚುರ ಪಡಿಸಿದವು.

ಮೆರವಣಿಗೆಯಲ್ಲಿ ಸೇವಾದಳ, ಶಾಲಾ ಮಕ್ಕಳ ವಾದ್ಯ ತಂಡ, ಗೊಂಬೆ ಹಾಗೂ ಪಟ ಕುಣಿತ, ಡೊಳ್ಳು, ವೇಷಗಾರ, ಬ್ಯಾಂಡ್ ಸೇರಿದಂತೆ ಇತರೆ ಸಾಂಸ್ಕೃತಿಕ ಕಲಾ ತಂಡಗಳು ಪಾಲ್ಗೊಂಡಿದ್ದವು. ಮೆರವಣಿಗೆಯು ನಗರದ ಮಹಾತ್ಮ ಗಾಂಧಿ, ಎಸ್.ಬಿ.ಎಂ, ಅಂಬೇಡ್ಕರ್ ಹಾಗೂ ಓಬವ್ವ ವೃತ್ತದ ಮೂಲಕ ಪೊಲೀಸ್ ಕವಾಯತು ಮೈದಾನ ತಲುಪಿದವು.

ಈ ವೇಳೆ ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್, ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಧಿಕಾರಿ ಎಂ.ಕಾರ್ತಿಕ್, ನಗರ ಸಭೆ ಆಯುಕ್ತೆ ರೇಣುಕಾ, ತಹಶೀಲ್ದಾರ್ ಡಾ.ನಾಗವೇಣಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.







## ಕರ್ನಾಟಕ ರಾಜ್ಯೋತ್ಸವ ಮಹತ್ವದ ಬಗ್ಗೆ ಮಕ್ಕಳಿಗೆ



» **ಹೊಸದುರ್ಗ**

ಕರ್ನಾಟಕ ರಾಜ್ಯೋತ್ಸವ ಆಚರಣೆ ಮಾಡುವ ಬಗ್ಗೆ, ಹಿನ್ನೆಲೆ ಹಾಗೂ ಅದರ ಮಹತ್ವವನ್ನು ಇಂದಿನ ಮಕ್ಕಳಿಗೆ ತಿಳಿಸುವ ಕಾರ್ಯವಾಗಬೇಕು. ನಾಡಿನ ಕಲೆ ಸಂಸ್ಕೃತಿ, ಸಾಹಿತ್ಯ, ಪರಂಪರೆ, ಉಳಿಸಿ ಬೆಳೆಸಬೇಕು. ಮೈಸೂರು ರಾಜ್ಯವನ್ನು ಅಂದಿನ ಮುಖ್ಯಮಂತ್ರಿ ಡಿ. ದೇವರಾಜ ಅರಸು ಕರ್ನಾಟಕ ಎಂದು ನಾಮಕರಣ ಮಾಡಿದರು. ಎಸ್. ನಿಜಲಿಂಗಪ್ಪ ಏಕೀಕರಣಕ್ಕೆ ಹೋರಾಡಿದ್ದಾರೆ ಎಂದರು.ತಾಲ್ಲೂಕು ಆಡಳಿತ, ತಾ.ಪಂ, ಪುರಸಭೆ ಹಾಗೂ ವಿವಿಧ ಸಂಘಟನೆಗಳ ವತಿಯಿಂದ ಪಟ್ಟಣದ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಈ ಸಂಧರ್ಬದಲ್ಲಿ ತಹಶೀಲ್ದಾರ್ ತಿರುಪತಿ ಪಾಟೀಲ್, ತಾ.ಪಂ. ಇಒ ಸುನೀಲ್ ಕುಮಾರ್, ಬಿ.ಇ.ಓ ಸೈಯದ್ ಮೋಸಿನ್, ಪುರಸಭೆ ಮುಖ್ಯಾಧಿಕಾರಿ ಜಿ.ವಿ. ತಿಮ್ಮರಾಜು, ಪೋಲಿಸ್ ನಿರೀಕ್ಷಕ ಮಧು, ಕಸಾಪ ತಾಲ್ಲೂಕು ಅಧ್ಯಕ್ಷ ಬಿ.ಪಿ. ಓಂಕಾರಪ್ಪ, ಪುರಸಭೆ ಅಧ್ಯಕ್ಷರಾದ ರಾಜೇಶ್ವರಿ ಆನಂದ್, ಉಪಾಧ್ಯಕ್ಷರಾದ ಗೀತಾ ಆಸಂದಿ, ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ವಿ. ಮಹಾಂತೇಶ್ ಸೇರಿದಂತೆ ಪುರಸಭೆ ಸದಸ್ಯರು ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳಿದ್ದರು.

ಇದೇ ಸಂಧರ್ಬದಲ್ಲಿ ಡಾ. ಸಂಜಯ್ (ವೈದ್ಯಕೀಯ ಕ್ಷೇತ್ರ) ಜಿ.ವಿ.ಟಿ.ವಿ ರಾಘು (ರಾಘವೇಂದ್ರಚಾರ್) (ದೃಶ್ಯ ಮಾಧ್ಯಮ) ಎಂ.ಬಿ. ಕುಮಾರಸ್ವಾಮಿ( ಚಿತ್ರಕಲಾ ಕ್ಷೇತ್ರ) ರಾಮಕೃಷ್ಣ (ರಾಮ್ಕಿ) (ಪತ್ರಿಕೋದ್ಯಮ ಕ್ಷೇತ್ರ) ಸೇರಿದಂತೆ ಹಲವರಿಗೆ ರಾಜ್ಯೋತ್ಸವ ಪ್ರಶಸ್ತ ನೀಡಿ ಅಭಿನಂದನೆ ಸಲ್ಲಿಸಲಾಯಿತು.

## ಹಲ್ಮಿಡಿ ಶಾಸನ ಪ್ರತಿಕೃತಿ ಅನಾವರಣ



**ಚಿತ್ರದುರ್ಗ:** ಕರ್ನಾಟಕ ಸಂಭ್ರಮ–50, ಹೆಸರಾಯಿತು ಕರ್ನಾಟಕ–ಉಸಿರಾಗಲಿ ಕನ್ನಡ ಅಭಿಯಾನದಡಿ, ಶುಕ್ರವಾರ ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಹಲ್ಮಡಿ ಶಾಸನದ ಪ್ರತಿಕೃತಿಯನ್ನು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅನಾವರಣಗೊಳಿಸಿದರು. ಬೇಲೂರು ತಾಲೂಕಿನ ಹಲ್ಮಿಡಿಯಲ್ಲಿ 1936ರಲ್ಲಿ ಪತ್ತೆಯಾದ ಶಾಸನವನ್ನು ಕನ್ನಡ ಲಿಪಿಯಲ್ಲಿ ಲಭ್ಯವಾದ ಮೊಟ್ಟ ಮೊದಲ ಶಾಸನವೆಂದು ಪರಿಗಣಿಸಲಾಗಿದೆ. 16 ಸಾಲುಗಳ ಬರಹ ಇದರಲ್ಲಿತ್ತು. ಇದು ಕ್ರಿ.ಶಕ 450ರ ಸುಮಾರಿನದ್ದು ಎಂದು ಅಂದಾಜಿಸಲಾಗಿದೆ. ಇದರ ಬಗ್ಗೆ ಸಾಕಷ್ಟು ಅಧ್ಯಯನ–ಅವಲೋಕನಗಳು ನಡೆದಿದೆ. ಹೀಗಾಗಿ ಈ ಶಿಲಾ ಶಾಸನದ ಮಹತ್ವವನ್ನು ಶಾಶ್ವತವಾಗಿ ಜನರ ನೆನಪಿನಲ್ಲಿ ಉಳಿಯುವಂತೆ ಮಾಡುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರದಲ್ಲಿ ಪ್ರತಿಕೃತಿ ಸ್ವರೂಪದಲ್ಲಿ ಇದನ್ನು ಕನ್ನಡ ಸಂಸ್ಕೃತಿ ಇಲಾಖೆಯಿಂದ ಸ್ಥಾಪಿಸಲಾಗಿದೆ. ಈ ವೇಳೆ ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿಯ ಅಧ್ಯಕ್ಷ ಜಿ.ಎಸ್.ಮಂಜುನಾಥ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್, ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ, ಉಪವಿಭಾಗಧಿಕಾರಿ ಕಾರ್ತಿಕ್ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ವಾಣಿ ವಿಲಾಸ ಸಾಗರ ಕೋಡಿ ಬೀಳಲು 3 ಅಡಿ ಬಾಕಿ

» **ಮೊದಲ ಪುಟದಿಂದ**

ಚಿತ್ರದುರ್ಗ, ಚಳ್ಳಕೆರೆ, ಹಿರಿಯೂರು ತಾಲೂಕುಗಳ ಜನರ ಕುಡಿಯುವ ನೀರಿನ ದಾಹ ಹಿಂಗಿಸುವ ಜಲಾಶಯವು 12135 ಹೆಕ್ಟರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರುಣಿಸುತ್ತದೆ. ಜನ ಜಾನುವಾರುಗಳಿಗೆ ಕುಡಿಯುವ ನೀರಿಗೂ ತತ್ವಾರ ಬಂದಂತಹ ಸ್ಥಿತಿಯಲ್ಲಿ ಮೈಸೂರು ಮಹಾರಾಜರು ತಾಲೂಕಿನ ಮಾರಿಕಣಿವೆ ಬಳಿ 1907 ರಲ್ಲಿ ಜಲಾಶಯ ನಿರ್ಮಿಸಿದರು. ಜಲಾಶಯದ ನಿರ್ಮಾಣದ ಕಾಲದಲ್ಲಿ ಸಂಪನ್ಮೂಲದ ಕೊರತೆ ಉಂಟಾಗಿದ್ದರಿಂದ ಮಹಾರಾಣಿಯವರ ಒಡವೆ ಅಡವಿಟ್ಟು ಹಣ ಹೊಂದಿಸಿ ಜಲಾಶಯ ನಿರ್ಮಾಣ ಕಾರ್ಯ ಪೂರ್ಣಗೊಳಿಸಿದರು ಎನ್ನಲಾಗಿದೆ. ಮೈಸೂರು ಅರಸರ ದೂರದೃಷ್ಟಿಯ ಆಲೋಚನೆಯಿಂದ ನೂರಾರು ವರ್ಷಗಳಿಂದ ಈ ಭಾಗದ ಜನ ಜಾನುವಾರುಗಳ ಕುಡಿಯುವ ನೀರಿನ ದಾಹ ನೀಗಿ ಸಾವಿರಾರು ಎಕರೆ ನೀರಾವರಿ ಸೌಲಭ್ಯ ಪಡೆದಿವೆ. ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದ್ದರೂ ನೀರುಣಿಸುತ್ತಲೇ ಇರುವ ಜಲಾಷಯವು 129 ಕಿಮೀ ಉದ್ದದ ಕಾಲುವೆ ಹೊಂದಿದೆ..



ಜಲಾಶಯ ನಿರ್ಮಾಣ ವಾಗಿ ಶತಮಾನ ಕಳೆದರೂ ಸಹ ಇಂದಿಗೂ ಗಟ್ಟಿ ಮುಟ್ಟಾಗಿದ್ದು ಇದರ ನಿರ್ಮಾಣಕ್ಕೆ ಕೇವಲ ಕಲ್ಲು ಮತ್ತು ಗಾರೆಯನ್ನು ಮಾತ್ರ ಬಳಸಲಾಗಿದೆ ಎಂಬುದು ಮತ್ತೊಂದು ವಿಶೇಷ.ಜಲಾಶಯ ನಿರ್ಮಾಣವಾಗಿ 26 ವರ್ಷಗಳ ನಂತರ ಅಂದರೆ 1933 ರಲ್ಲಿ ಮೊದಲ ಬಾರಿಗೆ ಕೋಡಿ ಬಿದ್ದಿತ್ತು. ಆನಂತರ ಸತತವಾಗಿ 89 ವರ್ಷಗಳ ಕಾಲ ಜಲಾಷಯ ಕೋಡಿ ಬೀಳಲೇ ಇಲ್ಲ.2022 ರ ಸೆಪ್ಟೆಂಬರ್ ತಿಂಗಳಲ್ಲಿ 89 ವರ್ಷದ ನಂತರ ಕೋಡಿ ಬಿದ್ದ ಜಲಾಶಯ ಈ ತಲೆಮಾರಿನ ಜನಕ್ಕೆ ಆಶ್ಚರ್ಯ ಮತ್ತು ಅಪರೂಪದ ಚಿತ್ರಣ ಒದಗಿಸಿತ್ತು. ಇದೀಗ ಕೇವಲ ಅದಾಗಿ ಎರಡೇ ವರ್ಷಕ್ಕೆ ಮತ್ತೆ ಅಂತಹುದೊಂದು ಸುವರ್ಣ ಗಳಿಗೆಗೆ ತಾಲೂಕು ಮತ್ತು ಜಿಲ್ಲೆ ಸಾಕ್ಷಿಯಾಗುವ ಕ್ಷಣಗಳು ಹತ್ತಿರ ಬರುತ್ತಿವೆ.ಚಿಕ್ಕಮಗಳೂರು ಜಿಲ್ಲೆಯ ಬಾಬಾ ಬುಡನ್ ಗಿರಿಯಲ್ಲಿ ಜನಿಸುವ ವೇದಾ ನದಿಯು ಮುಂದೆ ಸಾಗಿ ಕಡೂರಿನ ಬಳಿ ಅವತಿ ನದಿ ಜೊತೆ ಸೇರಿ ವೇದಾವತಿ ನದಿಯಾಗಿ ಹರಿದು ವಿವಿ ಸಾಗರದ ಒಡಲು ಸೇರುತ್ತದೆ.117 ವರ್ಷಗಳ ಇತಿಹಾಸವಿರುವ ಜಲಾಶಯದ ಎತ್ತರ 135.25 ಅಡಿ ಇದ್ದು ತಾಲೂಕಿನ ಮೂರನೇ ಒಂದು ಭಾಗದಷ್ಟು ರೈತರ ಜಮೀನುಗಳಿಗೆ ನೀರು ಒದಗಿಸುತ್ತದೆ.1933 ರಲ್ಲಿ 135 ಅಡಿ,1934 ರಲ್ಲಿ 130 ಅಡಿ,1957 125 ಅಡಿ,1958 ರಲ್ಲಿ 124 ಅಡಿ ನೀರು ಸಂಗ್ರಹ ಕಂಡಿತ್ತು.ಆನಂತರ 2021 ರಲ್ಲಿ 125 ಅಡಿ ತಲುಪಿ 2022 ರಲ್ಲಿ ಕೋಡಿ ಬೀಳುವ ಮೂಲಕ 89 ವರ್ಷಗಳ ನಂತರ ಇತಿಹಾಸ ಸೃಷ್ಟಿಸಿತ್ತು.30 ಟಿಎಂಸಿ ನೀರಿನ ಸಾಮರ್ಥ್ಯ ಹೊಂದಿರುವ ಜಲಾಶಯಕ್ಕೆ ಇನ್ನು ಒಂದೆರಡು ಟಿಎಂಸಿ ನೀರಿನ ಅವಶ್ಯಕತೆ ಇದ್ದು ಸೈಕ್ಲೋನ್ ಮತ್ತು ಅಕಾಲಿಕ ಮಳೆಯಿಂದಲೇ ಸಾಕಷ್ಟು ನೀರು ಹರಿದು ಬಂದಿದೆ.ಇದೀಗ ಕೋಡಿ ಬೀಳುವ ಸಂಭ್ರಮವನ್ನು ಕಣ್ತುಂಬಿಕೊಳ್ಳಲು ಜಿಲ್ಲೆಯ ಜನ ತುದಿಗಾಲಲ್ಲಿ ನಿಂತಿದ್ದು ಆದಷ್ಟು ಬೇಗ ರೈತರ ಆ ಕನಸು ಈಡೇರಲಿ.

## ಫಾಸ್ಟ್ ನ್ಯೂಸ್

### ಕನ್ನಡ ಉಳಿಯುವುದು ಭಾಷಣ, ಘೋಷಣೆ ಮೂಲಕ ಅಲ್ಲ: ಗಂಗಾಧರ್



» **ಚಿತ್ರದುರ್ಗ**

ಕನ್ನಡ ಉಳಿಯುವುದು ಕೇವಲ ಭಾಷಣ ಮತ್ತು ಘೋಷಣೆಗಳ ಮೂಲಕ ಅಲ್ಲ. ಅದು ನಮ್ಮ ಹೃದಯಾಂತರಾಳದ ಭಾಷೆಯಾದಾಗ ಹಾಗೆ ನಮ್ಮ ವೈಯಕ್ತಿಕ ಜೀವನದಲ್ಲಿ ಅದರ ಆಚರಣೆ ಅನುಷ್ಠಾನವಾದರೆ ಮಾತ್ರ ಕನ್ನಡ ಸಮೃದ್ಧವಾಗಿರಲು ಸಾಧ್ಯ ಎಂದು ನಗರದ ಶ್ರೀ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಪಾಲಿಟೆಕ್ನಿಕ್ ಉಪನ್ಯಾಸಕರಾದ ಗಂಗಾಧರ್ ಅವರು ಕಳಕಳಿ ವ್ಯಕ್ತಪಡಿಸಿದರು. ಅವರು ನಗರದ ಶ್ರೀ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಪಾಲಟೆಕ್ನಿಕ್ ನಲ್ಲಿ ಏರ್ಪಡಿಸಿದ್ದ 69ನೇ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಕನ್ನಡ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು ಕನ್ನಡ ಉಳಿಸಿ ಬೆಳೆಸಿ ಅಂದ್ರೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಅವರು ಪ್ರತಿ ಕನ್ನಡಿಗರೂ ತಾಯಿ ನುಡಿಯ ಬಗ್ಗೆ ಅಭಿಮಾನ ಇದ್ದಾಗ ಮಾತ್ರ ಭಾಷೆ ಸದಾ ಕ್ರಿಯಾಶೀಲತೆ ಹೊಂದಿರಲು ಸಾಧ್ಯ ಎಂದು ಹೇಳಿದರುಕಾಲೇಜಿನ ಗ್ರಂಥಪಾಲಕ ವೀರಯ್ಯ ಎಂ. ಮಾತನಾಡಿ ಕರ್ನಾಟಕ ಏಕೀಕರಣಕ್ಕೆ ಶ್ರಮಿಸಿದ, ಆನಂತರ ಕರ್ನಾಟಕ ಎಂದು ನಾಮಕರಣವಾಗಲು ಆ ಬಗ್ಗೆ ಶ್ರಮಿಸಿದ ಮಹಾನ್ ವ್ಯಕ್ತಿಗಳ ಶ್ರಮ ಸಾರ್ಥಕವಾಗಬೇಕಾದರೆ ನಾವು ಎಲ್ಲಾ ಹಂತದಲ್ಲಿ ಕನ್ನಡ ಕನ್ನಡ ಅನ್ನುವಂತಾದಾಗ ಮಾತ್ರ ಕನ್ನಡ ನುಡಿಗೆ ಎಲ್ಲಿಲ್ಲದ ಆಧ್ಯತೆ ಸಿಕ್ಕಂತಾಗುತ್ತದೆ ಎಂದು ಹೇಳಿದರು. ಕಾಲೇಜಿನ ಬೋಧಕ ಸುರೇಶ್. ಕೆ.ಮಾತನಾಡಿ ಕರ್ನಾಟಕದ ಭಾಷಾವಾರು ಪ್ರಾಂತಗಳನ್ನು ಒಗ್ಗೂಡಿಸುವುದು ಅಂದಿನವರಿಗೆ ಒಂದು ದೊಡ್ಡ ಸವಾಲು ಸ್ವಾತಂತ್ರ್ಯ ನಂತರದಲ್ಲಿ ಆಗಿತ್ತು. ಅದರಲ್ಲಿ ಕರ್ನಾಟಕ ಗಡಿಭಾಗಗಳನ್ನು ಕೂಡಿಸಿ ಹಂಚಿಹೋಗಿದ್ದ ಪ್ರಾಂತಗಳನ್ನು ಮತ್ತೆ ಕರ್ನಾಟಕಕ್ಕೆ ತರುವ ಪ್ರಯತ್ನ ನಮ್ಮಪೂರ್ವಿಕರು ಮಾಡಿ ಹೋಗಿದ್ದರ ಫಲ ನಮಗೆ ಈಗ ಯಾವ ಸಮಸ್ಯೆ ಇಲ್ಲ. ಇರುವುದನ್ನು ನಾವು ಜೋಪಾನ ಮಾಡುವ ಹೊಣೆಗಾರಿಕೆ ಎಲ್ಲರ ಮೇಲಿದೆ ಎಂದು ಹೇಳಿದ ಅವರು ನಾವು ಎಂದೆಂದಿಗೂ ಭಾಷಾಭಿಮಾನ ವಿಚಾರದಲ್ಲಿ ಮೈಮರೆತರೆ ಕರ್ನಾಟಕ ,ಕನ್ನಡ ಭಾಷೆ ಹೇಳ ಹೆಸರಿಲ್ಲದಂತಾಗುತ್ತದೆ ಎಂದು, ಆ ಬಗ್ಗೆ ಕನ್ನಡಿಗರಾದ ನಮ್ಮ ಮೇಲೆ ಬಹುದೊಡ್ಡ ಜವಾಬ್ದಾರಿ ಇದೆ ಎಂದು ಒತ್ತಿ ಹೇಳಿದರು. ಮೆಕ್ಯಾನಿಕಲ್ ವಿಭಾಗದ ಸೋಮಶೇಖರ್ ಮಾಷ್ಯಾಳ್ ಮಾತಾಡಿ ಎಲ್ಲ ಹಂತದಲ್ಲಿಯೂ ಕನ್ನಡ ಭಾಷೆಗೆ ಆದ್ಯತೆ ನೀಡದ ಹೊರತು ಕನ್ನಡ ಭಾಷೆಗೆ ಉಳಿವಿಲ್ಲ. ಕೆಲವೊಂದು ರಾಜ್ಯಗಳಲ್ಲಿ ಅವರಿಗೆ ಎಷ್ಟೊಂದು ಭಾಷಾ ಪ್ರೇಮವಿದೆ ಎನ್ನುವುದನ್ನು ನಾವು ಅವರಿಂದ ಕಲಿಯಬೇಕಾಗಿದೆ. ಪರ ಭಾಷಿಕರೊಂದಿಗೆ ನಾವು ಅವರದೇ ಆದ ಭಾಷೆಯಲ್ಲಿ ಮಾತನಾಡುವ ದೊಡ್ಡಗುಣ ರೂಡಿಸಿಕೊಂಡ ಕಾರಣ ಕನ್ನಡ ಅನಾಥ ಸ್ಥಿತಿಗೆ ಬರುವಂತ ಸ್ಥಿತಿಗೆ ತಂದು ಒಡ್ಡಿದ್ದೇವೆ ಎಂದು ಆತಂಕ ವ್ಯಕ್ತಪಡಿಸಿದರು

## 69ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರಧ್ವಜಾರೋಹಣ

# ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ರಾಜ್ಯ ಸರ್ಕಾರ ಬದ್ದ; ಸಚಿವ ಎಸ್.ಎಸ್.ಮಲ್ಲಿಕಾರ್ಜುನ್





» **ದಾವಣಗೆರೆ**

ಕರ್ನಾಟಕ ರಾಜ್ಯ ವೈವಿಧ್ಯತೆಗಳನ್ನು ಹೊಂದಿರುವ ಹಲವು ಜಗತ್ತುಗಳ ಒಂದು ರಾಜ್ಯ, ಇಲ್ಲಿನ ಸರ್ವ ಜನಾಂಗದ ಅಭಿವೃದ್ದಿಗೆ ಸರ್ಕಾರ ಬದ್ದವಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಜಿಲ್ಲಾಡಳಿತದಿಂದ ನವೆಂಬರ್ 1 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾದ 69 ನೇ ಕರ್ನಾಟಕ ರಾಜ್ಯೋತ್ಸವದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಪಥಸಂಚಲನದಲ್ಲಿ ಗೌರವ ವಂದನೆ ಸ್ವೀಕರಿಸಿ ಮಾತನಾಡಿದರು. 1956 ರಲ್ಲಿ ಏಕೀಕರಣಗೊಂಡ ಮೈಸೂರು ರಾಜ್ಯವನ್ನು 1973 ರಲ್ಲಿ ಕರ್ನಾಟಕ ಎಂದು ಮರುನಾಮಕರಣ ಮಾಡಲಾಯಿತು. ಈಗಾಗಲೇ ನಾಮಕರಣವಾಗಿ 50 ವರ್ಷಗಳನ್ನು ಪೂರೈಸಿದ್ದು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಮೊಟ್ಟ ಮೊದಲ ಹಲ್ಮಿಡಿ ಶಿಲಾಶಾಸನದ ಪ್ರತಿಕೃತಿಯನ್ನು ಪ್ರತಿಷ್ಠಾಪಿಸಲಾಗಿದೆ.

ಕರ್ನಾಟಕ ನಾಮಕರಣ ಸುವರ್ಣ ಸಂಭ್ರಮದ ಅಂಗವಾಗಿ ನಾಡಿನಾದ್ಯಂತ ಹಲವಾರು ಕನ್ನಡಪರ ಕಾರ್ಯಕ್ರಮಗಳನ್ನು ಏರ್ಪಡಿಸಿದ್ದು ದಾವಣಗೆರೆ ನಗರದ ಗಾಜಿನಮನೆಯ ಆವರಣದಲ್ಲಿ ನವೆಂಬರ್ ತಿಂಗಳಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕರ್ನಾಟಕ ರಾಜ್ಯೋತ್ಸವ ಸಮಸ್ತ ಕನ್ನಡಿಗರ ಹಬ್ಬ, ಇದು ನಮ್ಮ ನಾಡು–ನುಡಿ, ಹಿರಿಮೆ–ಗರಿಮೆ ಗಳನ್ನು ಮೆಲುಕು ಹಾಕುವ ಸಾಂಸ್ಕೃತಿಕ ಉತ್ಸವವಾಗಿದೆ. ಕಾವೇರಿಯಿಂದ ಗೋದಾವರಿವರೆಗೆ ವಿಸ್ತಾರವಾಗಿ ಹರಡಿದ್ದ ನಾಡು ಎರಡೂವರೆ ಸಾವಿರ ವರ್ಷಗಳಿಗೂ ಹೆಚ್ಚಿನ ಇತಿಹಾಸ ಹೊಂದಿದೆ. ಸಾಮ್ರಾಟ ಅಶೋಕ ಹಾಗೂ ಶಾತವಾಹನರ ಆಳ್ವಿಕೆಯಲ್ಲಿಯೂ ಕನ್ನಡ ಭಾಷೆಯ ಬಳಕೆಯನ್ನು ಕಾಣಬಹುದು. ರಾಜ ಮನೆತನಗಳಾದ ಕದಂಬ, ಗಂಗರು, ಚಾಲುಕ್ಯ, ರಾಷ್ಟ್ರಕೂಟರು, ಹೊಯ್ಸಳರು, ವಿಜಯನಗರದ ಅರಸರು ಮತ್ತು ಮೈಸೂರು ಒಡೆಯರ ಕಾಲದಲ್ಲಿ ಕನ್ನಡ ಭಾಷೆಯು ಸಾಹಿತ್ಯಿಕವಾಗಿ ಹಾಗೂ ಜನಮನದ ಭಾಷೆಯಾಗಿ ಹುಲುಸಾಗಿ ಬೆಳೆದು ಬಂದಿತು.

ಕಳೆದ 5 ದಶಕಗಳಲ್ಲಿ ರಾಜ್ಯದ ಬೆಳವಣಿಗೆಯನ್ನು ಅವಲೋಕಿಸಿದರೆ ಆಡಳಿತ, ಸಂಸ್ಕೃತಿ, ಸಾಹಿತ್ಯ, ಶಿಕ್ಷಣ, ವಿಜ್ಞಾನ, ಲಲಿತಕಲೆ, ಜಾನಪದ, ಕೃಷಿ, ನೀರಾವರಿ, ಪ್ರವಾಸೋದ್ಯಮ, ತಂತ್ರಜ್ಞಾನ, ಕೈಗಾರಿಕೆ ಹೀಗೆ ಹತ್ತು ಹಲವು ಕ್ಷೇತ್ರಗಳಲ್ಲಿ ಮಹತ್ತರ ಸಾಧನೆ ಮಾಡುವ ಮೂಲಕ ಅಂತರರಾಷ್ಟ್ರೀಯ ಮನ್ನಣೆ ಪಡೆಯಲಾಗಿದೆ. ನಾಡು ಹಲವು ಕ್ಷೇತ್ರಗಳಲ್ಲಿ ಅಭಿವೃದ್ಧಿ ಹೊಂದುತ್ತಿದ್ದು ಈಗಿನ ಯುವ ಜನರಿಗೆ ಪ್ರೇರಣಾದಾಯಕವಾಗಿದೆ. ಅವರೂ ಸಹ ಕನ್ನಡ ನಾಡಿನ ಅಭಿವೃದ್ಧಿಯಲ್ಲಿ ತೊಡಗಿಸಿಕೊಂಡು ರಚನಾತ್ಮಕ ಸಾಧನೆಗಳನ್ನು ಮಾಡುವಂತಾಗಲಿ ಎಂದು ತಮ್ಮ ಆಶಯ ವ್ಯಕ್ತಪಡಿಸಿದರು.

ಆಕರ್ಷಕ ಪಥ ಸಂಚಲನ: 15 ವಿವಿಧ ತುಕಡಿಗಳು ಶಿಸ್ತಿನ ಮತ್ತು ಆಕರ್ಷಕ ಪಥ ಸಂಚಲನದಲ್ಲಿ ಪ್ಲಟೂನ್ ಕಮಾಂಡರ್‌ನೊಂದಿಗೆ ಪಾಲ್ಗೊಂಡವು. ಮಹೇಶ್ ಪಾಟೀಲ್ ನೇತೃತ್ವದ ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಸಾಗರ್ ಅತರವಾಲ್ ನಗರ ಪೊಲೀಸ್ ತಂಡ, ಅಮರೇಶ್ ಗೃಹರಕ್ಷಕದಳ, ಟಿ.ಆರ್.ಪರಶುರಾಮಪ್ಪ ಜಿಲ್ಲಾ ಅಗ್ನಿ ಶಾಮಕ ದಳ, ಎ.ಆರ್.ಜಿ ಶಾಲೆಯ ಚಿನ್ಮಯಿ, ಜಿಎಫ್‌ಜಿಸಿ ಎನ್.ಸಿ.ಸಿ ಬಸವರಾಜ.ಜಿ, ಎವಿಕೆ ಕಾಲೇಜಿನ ಎನ್.ಸಿ.ಸಿ ಕುಮಾರಿ ತರುಣಾ ರಮೇಶ್. ಒಡೆಯರ್, ಸೆಂಟ್ ಪೌಲ್ಸ್ ಸ್ಕೂಲ್ ಎನ್.ಸಿ.ಸಿ ಚಂದನ, ಭಾರತ ಸೇವಾದಳ ಆರ್‌ಎಂಎಸ್‌ಎ ಐಶ್ವರ್ಯ. ಎಂ, ಭಾರತ್ ಸ್ಕೌಟ್ಸ್ & ಗೈಡ್ಸ್ ಡಿಸ್ಟ್ರಿಕ್ ಟ್ರೂಪ್ ಗರ್ಲ್ಸ್ ಮಾನಸ .ಡಿ.ಸಿ, ಸಿದ್ದಗಂಗಾ ಹೈಸ್ಕೂಲ್ ವಿಭಾಗದಿಂದ ರೋಷಿಣಿ, ತರಳುಬಾಳು ಹೈಸ್ಕೂಲ್‌ನಿಂದ ದೀಪಾ.ವೈ, ಸಿದ್ದಗಂಗಾ ಪ್ರೈಮರಿ ಸ್ಕೂಲ್ ವಿಭಾಗದಿಂದ ಮಧುಪ್ರಿಯಾ, ಸರ್ಕಾರಿ ಬಾಲಕರ ಹೈಸ್ಕೂಲ್ ವಿಭಾಗದಿಂದ ಓಂಕಾರ್ ಈ.ಯು, ಸೆಂಟ್ ಜಾನ್ಸ್ ಹೈಸ್ಕೂಲ್ ಗರ್ಲ್ಸ್ ವಿಭಾಗದಿಂದ




ಗೀತಾಂಜಲಿ ಮತ್ತು ಡಿಎಆರ್‌ನ ಬ್ಯಾಂಡ್ ಮಾಸ್ಟರ್ ಹೊನ್ನೂರಪ್ಪ ವಾದ್ಯ ತಂಡ ಭಾಗವಹಿಸಿದ್ದವು.

ವಿವಿಧ ಕ್ಷೇತ್ರಗಳಲ್ಲಿನ ಸಾಧಕರಿಗೆ ಸನ್ಮಾನ: ಕನ್ನಡ ರಾಜ್ಯೋತ್ಸವದ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ 33 ಗಣ್ಯರನ್ನು ಇದೇ ಸಂದರ್ಭದಲ್ಲಿ ಸ್ಮರಣಿಕೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು. ನಿಟ್ಟುವಳ್ಳಿಯ ಟಿ.ಶ್ರೀನಿವಾಸ್ ಶಿಲ್ಪಕಲೆ, ದಾವಣಗೆರೆ ಮೇಘಾಚಾರಿ.ವಿ., ನಗರದ ಬಂಬೂಬಜಾರ್‌ನ ಕೆ.ಆರ್.ಮೌನೇಶ್ವರ್ ಶಿಲ್ಪಿ, ಇವರುಗಳು ಶಿಲ್ಪಕಲೆ ಕ್ಷೇತ್ರ,

ಜಗಳೂರಿನ ಬಸವರಾಜು.ಟಿ, ಚನ್ನಗಿರಿಯ ಎ.ಎನ್ ಶಶಿಕಿರಣ್, ದಾವಣಗೆರೆಯ ಎಂ. ಬಸಣ್ಣ ಇವರುಗಳು ಸಂಗೀತ ಕ್ಷೇತ್ರದಲ್ಲಿ, ಮಾಯಕೊಂಡ ಪೀರಿಬಾಯಿ ಕೋಂ ಉಮ್ಲನಾಯ್ಕ, ಹರಿಹರದ ಹೆಚ್.ಪಿ. ನಾಗೇಂದ್ರಪ್ಪ, ಗುತ್ತೂರಿನ ಎಸ್.ಕೆ.ವೀರೇಶ್ ಕುಮಾರ್, ನಗರದ ಶೇಖರಪ್ಪ ನಗರದ ಪಿ.ಮೀನಾಕ್ಷಿ ಇವರುಗಳು ಜಾನಪದ ಕ್ಷೇತ್ರ,

ದಾವಣಗೆರೆಯ ಎ.ಎಂ.ಪ್ರಕಾಶ್ ಮುದ್ರಣಾ ಕ್ಷೇತ್ರ, ವಿನೋಬನಗರದ ಎಂ. ಮನು ಮತ್ತು ಹೊನ್ನಾಳಿಯ ಬಿ.ತಿಮ್ಮನಗೌಡ ಸಂಕೀರ್ಣ ಕ್ಷೇತ್ರದಲ್ಲಿ, ನಿಜಲಿಂಗಪ್ಪ ಬಡಾವಣೆಯ ಶ್ರೀನಾಥ.ಪಿ.ಅಗಡಿ ಛಾಯಾಗ್ರಹಣ, ಜಾಲಿನಗರದ ಎಸ್.ಪಿ.ಲಾವಣ್ಯ ಶ್ರೀಧರ್ ಯೋಗ, ಜಗಳೂರಿನ ಬಡಪ್ಪ ಬಯಲಾಟ, ಯಲ್ಲಮ್ಮ ನಗರದ ವಿನಾಯಕ ನಾಕೋಡ, ಎಸ್.ಎಂ.ಕೃಷ್ಣ ನಗರದ ಕೆ.ಎಸ್. ಕೊಟ್ರೇಶ್ ಇವರುಗಳು ರಂಗಭೂಮಿ ಕ್ಷೇತ್ರ, ಜಗಳೂರು ತಾಲ್ಲೂಕಿನ ದೊಣ್ಣೆಹಳ್ಳಿ ಗ್ರಾಮದ ಎಸ್.ವಿ.ವಿಶ್ವನಾಥ ಬಯಲಾಟ, ದೊಡ್ಡಾಟ,

ನಿಜಲಿಂಗಪ್ಪ ಬಡಾವಣೆಯ ರವಿಕುಮಾರ್.ಎ.ಜೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್. ಅರುಣಕುಮಾರ್ ಇವರುಗಳು ಸಮಾಜ ಸೇವೆ, ರವಿಕುಮಾರ್ ಕನ್ನಡಪ್ರಭ ಪತ್ರಿಕೆಯ ವರದಿಗಾರರು, ಎಂ.ಬಿ.ನವೀನ್, ವಿಜಯವಾಣಿ ಸ್ಥಾನಿಕ ಸಂಪಾದಕರು, ಹೆಚ್.ಟಿ ಪರಶುರಾಮ ಪಬ್ಲಿಕ್ ಟಿ.ವಿ ಕ್ಯಾಮರಾಮ್ಯಾನ್, ಒ.ಎನ್ ಸಿದ್ದಯ್ಯ ಜನತಾವಾಣಿ ಪತ್ರಿಕೆ, ಕೆ.ಎಸ್ ಚನ್ನಬಸಪ್ಪ ಆಕಾಶವಾಣಿ–ನಗರವಾಣಿ, ಮಂಜುನಾಥ. ಎಂ.ಎಸ್ ಪತ್ರಿಕಾ ವಿತರಕರು ಇವರುಗಳು ಪತ್ರಿಕೋದ್ಯಮ ಕ್ಷೇತ್ರ,

ವಿನೋಬನಗರದ ಸಂತೋಷ್ ದೊಡ್ಮನಿ, ಶುಭಮಂಗಳ ಬಿ.ಎಸ್, ನಾಗರಾಜ ಜಮ್ನಳ್ಳಿ, ಚನ್ನಗಿರಿಯ ಎಲ್.ಜಿ.ಮಧುಕುಮಾರ್ ಇವರುಗಳು ಕನ್ನಡ ಪರ ಹೋರಾಟ, ಚನ್ನಗಿರಿ ತಾಲ್ಲೂಕಿನ ಸಂತೆಬೆನ್ನೂರಿನ ಕೆ.ಸಿದ್ದಲಿಂಗಪ್ಪ ಸಾಹಿತ್ಯ ಕ್ಷೇತ್ರ, ಕುಕ್ಕವಾಡ ಗ್ರಾಮದ ಕೆ.ಟಿ.ಚಂದ್ರಶೇಖರಪ್ಪ ಕೃಷಿ ಕ್ಷೇತ್ರ

ಕಣ್ಮನ ಸೆಳೆದ ಸಾಂಸ್ಕೃತಿಕ ನೃತ್ಯ: ನಗರದ ನಿಟ್ಟುವಳ್ಳಿಯ ನಿಂಚನ ಪಬ್ಲಿಕ್ ಶಾಲೆ, ನಿಜಲಿಂಗಪ್ಪ ಬಡಾವಣೆಯ ಗುರುಕುಲ ಪಬ್ಲಿಕ್ ಶಾಲೆ, ಶಾಮನೂರು ಜೈನ್ ವಿದ್ಯಾಲಯ ಸಿಬಿಎಸ್‌ಇ ಶಾಲೆಯ ವಿದ್ಯಾರ್ಥಿಗಳು ಕನ್ನಡ ರಾಜ್ಯೋತ್ಸವದ ಕನ್ನಡ ಹಾಡುಗಳಿಗೆ ಹೆಜ್ಜೆ ಹಾಕಿದರು. ಹಾಗೂ ಕೊಡಗನೂರು ನಾಗರಾಜ್ ಇವರು ಹುಟ್ಟಿದರೆ ಕನ್ನಡ ನಾಡಿನಲ್ಲಿ ಹುಟ್ಟಬೇಕು ಎಂಬ ಗೀತೆಗೆ ಹೆಜ್ಜೆ ಹಾಕಿದರು. ಮೆರವಣಿಗೆ; ರಾಜ್ಯೋತ್ಸವ ಅಂಗವಾಗಿ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಅವರು, ಕನ್ನಡತಾಯಿ ಭುವನೇಶ್ವರಿ ಪ್ರತಿಮೆಗೆ ಪುಷ್ಪನಮನ ಸಲ್ಲಿಸುವ ಮೂಲಕ ಕಲಾ ತಂಡಗಳೊಂದಿಗೆ ವಿವಿಧ ಸ್ತಬ್ದ ಚಿತ್ರಗಳೊಂದಿಗೆ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆ ಕಲಾತಂಡಗಳೊಂದಿಗೆ ಜಿಲ್ಲಾ ಕ್ರೀಡಾಂಗಣದವರೆಗೆ ಸಾಗಿತು.

ಆಕರ್ಷಕ ಪಥಸಂಚಲನದಲ್ಲಿ ಬಹುಮಾನ ಪಡೆದ ತಂಡಗಳು: ಪ್ರಥಮ ಡಿಎಆರ್.ತಂಡ, ದ್ವಿತೀಯ ಗೃಹ ರಕ್ಷಕ ದಳ ತಂಡ, ತೃತೀಯ ನಗರ ಉಪವಿಭಾಗ ಪೊಲೀಸ್ ತಂಡ, ಎನ್ ಸಿ ಸಿ ತಂಡದ ವಿಭಾಗದಿಂದ ಪ್ರಥಮ ಎ.ಆರ್.ಜಿ, ಕಾಲೇಜು ತಂಡ, ದ್ವಿತೀಯ ಜಿಎಫ್‌ಜಿಸಿ ಕಾಲೇಜು, ತೃತೀಯ ಎ.ವಿ.ಕೆ ಕಾಲೇಜು ತಂಡ ಮತ್ತು ಹೈಸ್ಕೂಲ್ ತಂಡಗಳ ವಿಭಾಗದಲ್ಲಿ ಪ್ರಥಮ ಭಾರತ ಸೇವಾದಳ ತಂಡ, ದ್ವಿತೀಯ ಸೆಂಟ್ ಜಾನ್ಸ್ ಹೈಸ್ಕೂಲ್ ಗರ್ಲ್ಸ್, ತೃತೀಯ ಸರ್ಕಾರಿ ಬಾಲಕರ ಹೈಸ್ಕೂಲ್ ತಂಡ, ಪ್ರೈಮರಿ ತಂಡಗಳ ವಿಭಾಗದಲ್ಲಿ ಪ್ರಥಮ ಸಿದ್ದಗಂಗಾ ಪ್ರಾಥಮಿಕ ಶಾಲೆ, ಮತ್ತು ವಿಶೇಷ ತಂಡ ಪ್ರಥಮ ಭಾರತ್ ಸ್ಕೌಟ್ಸ್ & ಗೈಡ್ಸ್ ಡಿಸ್ಟ್ರಿಕ್ ಟ್ರೂಪ್ ಗರ್ಲ್ಸ್ ತಂಡ ಮತ್ತು ಜಿಲ್ಲಾ ಪೊಲೀಸ್ ವಾದ್ಯವೃಂದ ತಂಡಗಳು ಬಹುಮಾನ ಪಡೆದವು.

ಬಹುಮಾನ ಪಡೆದ ಸಾಂಸ್ಕೃತಿಕ ನೃತ್ಯ ತಂಡಗಳು: ಪ್ರಥಮ ನಿಜಲಿಂಗಪ್ಪ ಬಡಾವಣೆಯ ಗುರುಕುಲ ಪಬ್ಲಿಕ್ ಶಾಲೆ, ದ್ವಿತೀಯ ಶಾಮನೂರು ಜೈನ್ ವಿದ್ಯಾಲಯ ಸಿಬಿಎಸ್‌ಇ ಶಾಲೆ, ತೃತೀಯ ನಗರದ ನಿಟ್ಟುವಳ್ಳಿಯ ನಿಂಚನ ಪಬ್ಲಿಕ್ ಶಾಲೆ ಬಹುಮಾನ ಪಡೆದವು.

ಹಲ್ಮಿಡಿ ಶಾಸನ ಸ್ಥಾಪನೆ; ಮೊಟ್ಟ ಮೊದಲ ಹಲ್ಮಿಡಿ ಶಾಸನದ ಪ್ರತಿಕೃತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಪ್ರತಿಷ್ಟಾಪಿಸಲಾಯಿತು. ಈ ವೇಳೆ ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಭಾಗವಹಿಸಿ ನೆರವೇರಿಸಿದರು.

ಸಮಾರಂಭದಲ್ಲಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಶಾಸಕರಾದ ಕೆ.ಎಸ್.ಬಸವಂತಪ್ಪ, ಮೇಯರ್ ಚಮನ್ ಸಾಬ್.ಕೆ, ದೂಡಾ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ, ಉಪ ಮೇಯರ್ ಸೋಗಿ ಶಾಂತಕುಮಾರ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ, ಜಿ.ಪಂ ಸಿಇಒ ಸುರೇಶ್ ಇಟ್ನಾಳ್, ಎಸ್ಪಿ ಉಮಾ ಪ್ರಶಾಂತ್ ಹಾಗೂ ಇನ್ನಿತರೆ ಗಣ್ಯರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ವಾಲ್ಮೀಕಿ ಆದರ್ಶಗಳ ಯುವ ಪೀಳಿಗೆ ಅಳವಡಿಸಿಕೊಳ್ಳಿ: ವಾಲ್ಮೀಕಿ ಶ್ರೀ

» **ನಮ್ಮಜನ ಸಮಾಚಾರ**

ಹೊಸದುರ್ಗ: ರತ್ನಾಕರ ಎಂಬುದು ಮಹರ್ಷಿ ವಾಲ್ಮೀಕಿ ಅವರ ತಂದೆ ತಾಯಿಗಳ ಇಟ್ಟ ಹೆಸರು ಬೇಡನಾಗಿ ಹುಟ್ಟಿದ ರತ್ನಾಕರ ಬೇಟೆಯಾಡಿ ಜೀವನ ಸಾಗಿಸುತ್ತಿದ್ದ ರತ್ನಾಕರನ ಮೂಲ ವೃತ್ತಿ ಭೇಟಿಯಾಡುವುದು., ಭೇಟಿಯಾಡಿಕೊಂಡು ಜೀವನ ನಡೆಸುತ್ತಿದ್ದ ರತ್ನಾಕರ ನಾರದ ಮಹರ್ಷಿಗಳ ಸಂದೇಶದಿಂದ ರಾಮ ತಾರಕ ಮಂತ್ರ ಜಪಿಸಿ ಮಹರ್ಷಿ ವಾಲ್ಮೀಕಿಯಾದರು ಅಧಿಕಾರ ಮತ್ತು ಆಸ್ತಿಯನ್ನು ಅಣ್ಣತಮ್ಮಂದಿರ ತ್ಯಾಗವನ್ನೇ ರಾಮಾಯಣ ಎಂದು ವಾಲ್ಮೀಕಿ ರಾಮಾಯಣದಲ್ಲಿ ಉಲ್ಲೇಖಿಸಲಾಗಿದೆ ಎಂದು ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದ ಸ್ವಾಮೀಜಿ ತಿಳಿಸಿದರು.

ತಾಲೂಕಿನ ಡಿ ಮಲ್ಲಾಪುರದಲ್ಲಿ ನಡೆದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು ಬೆಳಕಿನ ದೀಪವೆಂಬುದು ಜಾಗೃತಿ, ಜ್ಞಾನ,ಅರಿವಿನ ಸಂಕೇತವಾಗಿದೆ ದೇಹ ಎಂಬ ಕಂಬದೊಳಗೆ ಆತ್ಮ, ನಮ್ಮ ಬದುಕು ಜಾತಿಯ ಕಾರಣಕ್ಕಿಂತ ನೀತಿಯ ಕಾರಣಕ್ಕೆ ಶ್ರೇಷ್ಠವಾಗಬಾರದೆಂದು ಮಹರ್ಷಿ ವಾಲ್ಮೀಕಿ ಅಂದೇ ತಿಳಿಸಿದ್ದಾರೆ. ಜಾತಿಯಲ್ಲಿ ಹುಟ್ಟಿದ ಮಹಾತ್ಮರನ್ನು ಜಾತಿಯ ಲೇಪನಕ್ಕೆ ಸೇರಿಸಬಾರದು ಮನುಷ್ಯ ಹುಟ್ಟಿನಿಂದ ಸಾಯುವವರೆಗೂ ಆಸ್ತಿ ನಮ್ಮ ಅಧಿಕಾರಕ್ಕಾಗಿ ಜಗಳ ರಾಮನ ಮೂಲಕ ಜಗತ್ತಿಗೆ ಧರ್ಮದ ಸಂದೇಶವನ್ನು ವಾಲ್ಮೀಕಿ ನೀಡಿದ್ದಾರೆ. ತ್ಯಾಗವೇ ಮಾನವ ಧರ್ಮ ಎಂಬ ಸಂದೇಶವನ್ನು



ರಾಮಾಯಣ ಮೂಲಕ ನಿಜವಾದ ಸಂದೇಶವನ್ನು ಸಮಾಜಕ್ಕೆ ನೀಡಿದ್ದಾರೆ.

ವಾಲ್ಮೀಕಿ ರಾಮಾಯಣದ ಪ್ರಭು ಶ್ರೀರಾಮನ ಕುಟುಂಬ ವ್ಯವಸ್ಥೆಯನ್ನು ಭಾರತೀಯ ಸಂವಿಧಾನದಲ್ಲಿ ಅಂಬೇಡ್ಕರ್ ಜಾರಿಗೊಳಿಸಿದ್ದಾರೆ ಭಾರತೀಯ ಕೌಟುಂಬಿಕ ವ್ಯವಸ್ಥೆಯಲ್ಲಿ ರಾಮಾಯಣ ಮಹಾಕಾವ್ಯದ ವ್ಯವಸ್ಥೆ ಜಾರಿಯಲ್ಲಿದೆ. ರಾಮಾಯಣದಲ್ಲಿ ಯಾರು ರಾಜ್ಯ ಪದವಿಯನ್ನು ಬೇಕು ಎಂದು ಪಡೆದವರಲ್ಲ ಅಣ್ಣ ತಮ್ಮಂದಿರ ತ್ಯಾಗ, ಇಲ್ಲಿ ಬಹು ಮುಖ್ಯ ಪಾತ್ರ ವಹಿಸುತ್ತದೆ. ಸ್ವತಂತ್ರ ಭಾರತದ ತರುವಾಯ ನಮ್ಮ ಮೂಲ ಕಸಬು ಮರೆಯಾಯಿತು ಕೇವಲ ಚುನಾವಣೆಯ ಸಂದರ್ಭದಲ್ಲಿ ನಮ್ಮನ್ನು ಬಳಸಿಕೊಂಡು ಅದಕ್ಕೆ ಅಧಿಕಾರಕ್ಕೆ ಬಂದ ನಂತರ ನಮ್ಮ ಹಿತವನ್ನ ಮರೆತುಬಿಡುತ್ತಾರೆ. ಸಮುದಾಯದ ಹಿತಕ್ಕೆ ಧಕ್ಕೆ ಬಂದಾಗ ಎಲ್ಲರೂ ಒಗ್ಗಟ್ಟಾಗಿ ನಡೆದಾಗ ಮಾತ್ರ ಸಮುದಾಯದ ಅಭಿವೃದ್ಧಿ ಸಾಧ್ಯ ಎಂದರು.

ಉದ್ಘಾಟನೆ ನೆರವೇರಿಸಿ ಶಾಸಕ ಬಿಜಿ ಗೋವಿಂದಪ್ಪ ಮಾತನಾಡಿ ರಾಮಾಯಣ ಮಹಾ ಗ್ರಂಥವನ್ನ ರಚಿಸಿದ ವಾಲ್ಮೀಕಿ ಶಿಕ್ಷಣದಲ್ಲಿ ಅಪಾರ ಪಾಂಡಿತ್ಯ ಹೊಂದಿದ್ದರು ವಾಲ್ಮೀಕಿ ಸಂಸ್ಥಾನದ ಶ್ರೀಗಳು ನಿರಂತರವಾಗಿ ನಾಡಿನಲ್ಲಡೇ ಸಂಚರಿಸಿ ಸಮುದಾಯದ ಸಂಘಟನೆ ಮಾಡುತ್ತಿದ್ದಾರೆ ವಾಲ್ಮೀಕಿ ಸಮುದಾಯ ಸದಾ ನನ್ನ ಜೊತೆಗಿದ್ದು ಸಹಕರಿಸಿದ್ದಾರೆ. ಮಲ್ಲಾಪುರ ಗ್ರಾಮದಲ್ಲಿ ಸರ್ಕಾರಿ ಶಾಲೆ, ಶಿಥಿಲಾವಸ್ಥೆಯಲ್ಲಿದ್ದು ಇಲ್ಲಿನ ಮಕ್ಕಳ ಶಿಕ್ಷಣ ಅಭಿವೃದ್ಧಿಗಾಗಿ ನೂತನ ಶಾಲಾ ಕೊಠಡಿಯನ್ನು ನೀಡಿ ಮೂಲಭೂತ ಸೌಕರ್ಯ ಕಲ್ಪಿಸಲಾಗುವುದು ರೈತರ ಸಿರಿಧಾನ್ಯ ಬೆಳೆಗಳಿಗೆ ರಾಷ್ಟ್ರಮಾನ್ಯತೆ ಸಿಕ್ಕಿದ್ದು ಮುಂದಿನ ದಿನಗಳಲ್ಲಿ ಹೊಸದುರ್ಗ ತಾಲೂಕಿನ ರೈತರಿಗೆ ಅತಿಹೆಚ್ಚಿನ ಅನುಕೂಲವಾಗಲಿದೆ ಎಂದರು.

ಮೊಳಕಾಲ್ಮೂರು ಮಾಜಿ ಶಾಸಕ ನೇರಲಗುಂಟೆ ತಿಪ್ಪೇಸ್ವಾಮಿ ಮಾತನಾಡಿ ವನವಾಸ ಎಂದರೇನು?ರಾಜ ಎಂದರೇನು? ಪ್ರಜೆ ಎಂದರೇನು ಕುಟುಂಬ ಎಂದರೇನು ಎಂದು ಜಗತ್ತಿಗೆ ಪರಿಚಯಿಸಿದ ವಾಲ್ಮೀಕಿ,ರಾಮಾಯಣ ಬರೆದ ಮಹರ್ಷಿಗಳುನಾಯಕರೆಂದರೆ ಕತ್ತಲಲ್ಲೇ ಹುಟ್ಟಿ ಕತ್ತಲಲ್ಲೇ ಬದುಕಿ ಬೆಳಕನ್ನ ಪ್ರಪಂಚಕ್ಕೆ ನೀಡಿದ ಸಮುದಾಯ ವಾಲ್ಮೀಕಿ ಸಮುದಾಯ, ಈ ಸಮುದಾಯ. ಸಾವಿರಾರು ವರ್ಷದ ಇತಿಹಾಸವಿರುವ ವಾಲ್ಮೀಕಿ ಸಮುದಾಯ ಧಾರ್ಮಿಕ ನಾಯಕತ್ವದ ಕೊರತೆ ಇಂಥ ಸಂದರ್ಭದಲ್ಲಿ ವಾಲ್ಮೀಕಿ ಪ್ರಸನ್ನಾನಂದ ಶ್ರೀಗಳು ಸಮುದಾಯದ ಧಾರ್ಮಿಕ ನಾಯಕತ್ವ ವಹಿಸಿದ್ದಾರೆ. ಕತ್ತಲಲ್ಲಿ ಬದುಕಿದ ಸಮುದಾಯ ಬೆಳಕಿನೆಡೆಗೆ ಹೋಗಲು ಹೊಸ ಆನಂದ ಶ್ರೀಗಳು ಕಾರಣರಾಗಿದ್ದಾರೆ ಎಂದರು.ಖನಿಜ ನಿಗಮ ಮಾಜಿ ಅಧ್ಯಕ್ಷ ಎಸ್ಸು ಲಿಂಗಮೂರ್ತಿ ಮಾತನಾಡಿ ಮೀಸಲಾತಿಯಿಂದ ವಂಚಿತವಾಗಿದ್ದ ಈ ಸಮುದಾಯಕ್ಕೆ ಸಮುದಾಯಕ್ಕೆ ವಾಲ್ಮೀಕಿ ಶ್ರೀಗಳು ಅವಿರತ ಹೋರಾಟ ನಡೆಸಿ ಮೀಸಲಾತಿ ಕೊಡಿಸುವುದರ ಮೂಲಕ ಶಿಕ್ಷಣದ ಬನಾದಿ ಹಾಕಿದ್ದಾರೆ. ವಾಲ್ಮೀಕಿ ಮಹರ್ಷಿಗಳು ಒಂದು ಸಮುದಾಯಕ್ಕೆ ರಾಮಾಯಣ ನೀಡದೆ ಜಗತ್ತಿಗೆ ರಾಮಾಯಣವನ್ನು ನೀಡಿದ್ದಾರೆ, ನಂಬಿಕೆಗೆ ಇನ್ನೊಂದು ಹೆಸರೇ ವಾಲ್ಮೀಕಿ ಸಮಾಜ. ವಾಲ್ಮೀಕಿ ಸುಮುದಾಯ ಎಲ್ಲಾ ರಂಗದಲ್ಲಿ ಅಭಿವೃದ್ಧಿಯಾಗಬೇಕು ಈ ಸಮುದಾಯದ ಪಾಳೇಗಾರರು ತನ್ನ ಸರ್ವಸವನ್ನು ನಾಡಿನ ಜನರಿಗೆ ಅರ್ಪಿಸಿದ್ದಾರೆ ಎಂದರು.

ಯುವ ಉದ್ಯಮಿ, ಸದ್ಗುರು ಪ್ರದೀಪ್ ಇಲ್ಲಿನ ಸರ್ಕಾರಿ ಶಾಲೆಯನ್ನ ದತ್ತು ಸ್ವೀಕರಿಸಿ ನಂತರ ಮಾತನಾಡಿದ ಅವರು ರಾಮಾಯಣ ರಚಿಸಿದ ವಾಲ್ಮೀಕಿ ಸಮುದಾಯದವರು, ಶಿಕ್ಷಣದಿಂದ ಎಲ್ಲವನ್ನೂ ಪಡೆಯಬಹುದು. ಪೋಷಕರು ಮಕ್ಕಳ ಶಿಕ್ಷಣಕ್ಕೆ ಅತಿ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು. ಮೀಸಲಾತಿಯ ಜೊತೆಗೆ ಸಾಮಾನ್ಯ ವರ್ಗವನ್ನು ಪ್ರತಿನಿಧಿಸುವಂತಾಗಬೇಕು ರಾಮಾಯಣ ಎಂದರೆ ತ್ಯಾಗದ ಸಂಕೇತ ಎಂದರು. ಅಣ್ಣ ತಮ್ಮ ಅಕ್ಕ ತಂಗಿ ತಂದೆ ಮಕ್ಕಳ ಕುರಿತಾದ ವಾಲ್ಮೀಕಿ ರಚಿಸಿದ ರಾಮಾಯಣ ಗ್ರಂಥ ಇಂದಿಗೂ ಭಾರತದಲ್ಲಿ ಪ್ರಚಲಿತದಲ್ಲಿದೆ ಎಂದರು.

ಕಾರ್ಯಕ್ರಮದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ ಮಾಜಿ ಜಿ ಪಂ ಸದಸ್ಯರಾದ ಬಿ ಎಸ್ ದ್ಯಾಮಪ್ಪ, ಲಕ್ಷ್ಮಣ್, ಪರುಶುರಾಮಪ್ಪ, ರಮೇಶ್,ಗೂಳಿಹಟ್ಟಿ ಕೃಷ್ಣಮೂರ್ತಿ, ಗ್ರಾ ಪಂ, ಅಧ್ಯಕ್ಷ ಲಕ್ಷ್ಮೀದೇವಿ ಉಪಾಧ್ಯಕ್ಷ ತಿಮ್ಮೇಶ್ ನಾಯಕ ಸಮಾಜ ಅಧ್ಯಕ್ಷ ಕೆ ಟಿ ರಂಗನಾಥ್, ಉಪಾಧ್ಯಕ್ಷ ಗೌಡ್ರ ತಿಪ್ಪೇಸ್ವಾಮಿ ತುಂಬಿನಕೆರೆ ಬಸವರಾಜ್, ಮಳಲಿ ವಿಜಯಕುಮಾರ್,, ವಕೀಲ ನರೇಂದ್ರಬಾಬು, ಮಾಜಿ ಜಿ ಪಂ ಸದಸ್ಯರಾದ ದೊಡ್ಡಘಟ್ಟ ಲಕ್ಷ್ಮಣ್ ಪರಶುರಾಮಪ್ಪ ದ್ಯಾಮಪ್ಪ, ಗೂಳಿಹಟ್ಟಿ ಕೃಷ್ಣಮೂರ್ತಿ, ಗುತ್ತಿಕಟ್ಟೆ ಕೆಂಚಪ್ಪ,ರವಿತೇಜ ಹನುಮಂತಪ್ಪ, ಗ್ರಾಪಂ ಅಧ್ಯಕ್ಷ ನಾಗರತ್ನಮ್ಮ ಉಪಾಧ್ಯಕ್ಷ ದಿನೇಶ್, ಸದಸ್ಯರಾದ ಜಯಪ್ಪ ಕರಿಯಪ್ಪ ನರಸಿಂಹಮೂರ್ತಿ, ಗಾದ್ರಪ್ಪ,ಜಯಪ್ಪ ಪ್ರಸನ್ನ, ವಾಲ್ಮೀಕಿ ಸಂಘದ ಯುವಕರು ಮತ್ತು ಗ್ರಾಮಸ್ಥರು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T